ಸಂಪುಟ : 10 ಸಂಚಿಕೆ: 42 ಪುಟ : 4+2 ಬೆಲೆ: 3.00 ಶುಕ್ರವಾರ ಮಾರ್ಚ್ 14 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 42 Pages : 4+2 Price : 3.00 Friday March 14 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

### ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾ ಘಟಕದ ಅಧ್ಯಕ್ಷ ರವಿ ಗುಂಜೀಕರ ಮಾಹಿತಿ

# ಜಿಲ್ಲಾ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರ ಸಂಘ ಬೆಂಗಳೂರು, ಜಿಲ್ಲಾ ಶಾಖೆ ಗದಗ ವತಿಯಿಂದ ಎರಡನೇ ಬಾರಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾಗಿರುವ ಸಿ.ಎಸ್. ಷಡಕ್ಷರಿ ಅವರಿಗೆ ಅಭಿನಂದನಾ ಸಮಾರಂಭ ಹಾಗೂ ಗದಗ ಜಿಲ್ಲಾ ಶಾಖೆಯ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭವನ್ನು ಮಾರ್ಚ್ 15ರಂದು ನಗರದ ಭೀಮಸೇನ ಜೋಶಿ ಕಲಾರಂಗ ಮಂದಿರದಲ್ಲಿ ಆಯೋಜಿಸಲಾಗಿದೆ ಎಂದು ರಾಜ್ಯ ಸರ್ಕಾರಿ ನೌಕರರ ಸಂಘದ ಗದಗ ಜಿಲ್ಲಾಧ್ಯಕ್ಷ ರವಿ ಗುಂಜೀಕರ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಸಿ.ಎಸ್. ಷಡಕ್ಷರಿ ಅವರು 2ನೇ ಬಾರಿ ರಾಜ್ಯಾಧ್ಯಕ್ಷರಾಗಿ ಆಯ್ಕೆಯಾದ ನಂತರ ಮೊದಲ ಬಾರಿಗೆ ಗದಗ ಜಿಲ್ಲೆಗೆ ಆಗಮಿಸುತ್ತಿದ್ದಾರೆ. ಹಿಂದಿನ ರಾಜ್ಯಾಧ್ಯಕ್ಷರಿ-ಗಿಂತ ಕ್ರಿಯಾಶಿಲರಾಗಿ ಸೇವೆ ಸಲ್ಲಿಸಿದ ಕೀರ್ತಿ




ಸಿ.ಎಸ್. ಷಡಕ್ಷರಿ ಅವರಿಗೆ ಸಲ್ಲುತ್ತದೆ.

ರಾಜ್ಯದ ಎಲ್ಲ ನೌಕರರನ್ನು ಮನವೊಲಿಸಿ ಯಶಸ್ವಿಯಾಗಿ ಸಂಘಟನೆಯನ್ನು ಮುನ್ನಡೆಸಿಕೊಂಡು ಹೋಗುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಅವರಿಗೆ ಅಭಿನಂದನಾ ಸಮಾರಂಭ ಹಮ್ಮಿಕೊಂಡಿದ್ದೇವೆ ಎಂದು ಹೇಳಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ರಾಜ್ಯದ್ಯಕ್ಷ ಸಿ.ಎಸ್. ಷಡಕ್ಷರಿ ನೆರವೇರಿಸಲಿದ್ದು, ಮುಖ್ಯ ಅತಿಥಿಗಳಾಗಿ ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಬಿ. ಸಂಕದ ಆಗಮಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಜ್ಯ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷ ರವಿ ಗುಂಜೀಕರ ವಹಿಸಿಕೊಳ್ಳಲಿದ್ದಾರೆ ಎಂದರು.

ಕಾರ್ಯಕ್ರಮದ ಅಂಗವಾಗಿ ನಗರದ ಮುಳಗುಂದ ನಾಕಾದಿಂದ ಧೋಬಿ ಘಾಟ್, ಟಿಪ್ಪು ಸರ್ಕಲ್ ಮಾರ್ಗವಾಗಿ ಬೈಕ್ ರ್‍ಯಾಲಿ ನಡೆಯಲಿದ್ದು, ವಿವಿಧ ಕಲಾ ತಂಡಗಳು ಭಾಗವಹಿಸಲಿವೆ. ನಂತರ ಜಿಲ್ಲಾಧಿಕಾರಿ ಕಛೇರಿಯಿಂದ ಭೀಮಸೇನ ಜೋಶಿ ರಂಗಮಂದಿರದವರೆಗೆ ಕುಂಭಮೇಳ ನಡೆಯಲಿದೆ. ಜಿಲ್ಲೆಯ ಎಲ್ಲ ಚುನಾಯಿತ ಸದಸ್ಯರ ಪದಗ್ರಹಣ ಕಾರ್ಯಕ್ರಮ ನಡೆಯಲಿದ್ದು, ತಾಲೂಕಿನ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಸರ್ಕಾರಿ ನೌಕರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ರವಿ ಗುಂಜೀಕರ ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಡಿ.ಟಿ. ವಾಲ್ಮೀಕಿ, ಎಂ.ಎಂ. ನಿಟ್ಟಾಲಿ, ಡಾ. ಬಸವರಾಜ ಬಳ್ಳಾರಿ, ಡಿ.ಎಸ್. ತಳವಾರ, ಸಿದ್ದಪ್ಪ ಲಿಂಗದಾಳ, ಮಾರುತಿ ಮಂಗಳಾಪುರ ಉಪಸ್ಥಿತರಿದ್ದರು.

### ಪುಟ್ಟರಾಜ ಸ್ಮಾರಕ ಭವನ ಕಾಮಗಾರಿ ಪೂರ್ಣಗೊಳಿಸಲು ಅನುದಾನದ ಕೊರತೆ

## ಅಗತ್ಯ ಹಣ ಬಿಡುಗಡೆಗೆ ಸಚಿವರ ಭರವಸೆ

■ ವಿಜಯಸಾಕ್ಷಿ ಸುದ್ದಿ, ಗದಗ



ನಗರದ ವೀರೇಶ್ವರ ಪುಣ್ಯಾಶ್ರಮದ ಪುಟ್ಟರಾಜ ಗವಾಯಿಗಳ ಸ್ಮಾರಕ ಭವನದ ಕಾಮಗಾರಿ ಅನುದಾನದ ಕೊರತೆಯಿಂದ ಅರ್ಧಕ್ಕೆ ನಿಂತಿರುವ ಬಗ್ಗೆ ವಿಧಾನ ಪರಿಷತ್‌ನಲ್ಲಿ ಮಾ.13ರಂದು ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಿದ ವಿಧಾನ ಪರಿಷತ್ ಸದಸ್ಯರಾದ ಪ್ರೊ. ಎಸ್.ವಿ. ಸಂಕನೂರ, ಈ ಕಾಮಗಾರಿಗೆ ಅಗತ್ಯವಾದ ಅನುದಾನವನ್ನು ಕೂಡಲೇ ನೀಡಲು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರನ್ನು ಒತ್ತಾಯಿಸಿದರು.

ನಗರದ ವೀರೇಶ್ವರ ಪುಣ್ಯಾಶ್ರಮದ ಪಕ್ಕದಲ್ಲಿ ನಿರ್ಮಾಣಗೊಳ್ಳುತ್ತಿರುವ ಪುಟ್ಟರಾಜ ಗವಾಯಿಗಳ ಸ್ಮಾರಕ ಭವನದ ಕಾಮಗಾರಿಗೆ ಸರಕಾರ ಈಗಾಗಲೇ 6.24 ಕೋಟಿ ರೂ.ಗಳನ್ನು ಖರ್ಚು ಮಾಡಿದ್ದು, ಕಟ್ಟಡ ಪೂರ್ಣಗೊಳ್ಳಲು ಇನ್ನೂ 5ರಿಂದ 7 ಕೋಟಿ ರೂ. ಹೆಚ್ಚುವರಿಯಾಗಿ ಬೇಕಿದೆ. ಸರಕಾರಕ್ಕೆ 5 ಕೋಟಿ ರೂಪಾಯಿ ಏನೂ ದೊಡ್ಡದಲ್ಲ. ಅಂಧ, ಅನಾಥ ಮಕ್ಕಳಿಗೆ ಬೆಳಕು ನೀಡಿದ ವೀರೇಶ್ವರ ಪುಣ್ಯಾಶ್ರಮದ ಪೀಠಾಧಿಕಾರಿಗಳಾಗಿ ಕಾರ್ಯ ನಿರ್ವಹಿಸಿದ ಲಿಂಗೈಕ್ಯ ಪುಟ್ಟರಾಜ ಗವಾಯಿಗಳ ಬಗ್ಗೆ ಸರಕಾರಕ್ಕೆ ಕಾಳಜಿ ಇಲ್ಲದಿರುವುದಕ್ಕೆ ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ ಎಂದರು. ಹೆಚ್ಚುವರಿ ಅನುದಾನ ಬಿಡುಗಡೆಗೆ ಸರಕಾರಕ್ಕೆ ಮನವಿ ಸಲ್ಲಿಸಿದರೂ ಬಿಡುಗಡೆಯಾಗದ ಹಿನ್ನೆಲೆಯಲ್ಲಿ, ಗದುಗಿನಲ್ಲಿ ಭಕ್ತರು ಭಿಕ್ಷೆ ಬೇಡಿ ಸಂಗ್ರಹವಾದ ಹಣವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಕೊಟ್ಟಿರುವುದಾಗಿ ಪತ್ರಿಕೆಗಳಲ್ಲಿ ಈಗಾಗಲೇ ಪ್ರಕಟವಾಗಿದೆ. ಈ ಹಿನ್ನೆಲೆಯಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಬೇಗನೆ ಅನುದಾನ ಬಿಡುಗಡೆ ಮಾಡಿ ಪುಟ್ಟರಾಜ ಸ್ಮಾರಕ ಭವನ ಕಾಮಗಾರಿ ಪೂರ್ಣಗೊಳಿಸಬೇಕು ಎಂದು ಎಸ್.ವಿ. ಸಂಕನೂರ ಒತ್ತಾಯಿಸಿದರು. ಪ್ರೊ. ಸಂಕನೂರ ಅವರ ಪ್ರಶ್ನೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಉತ್ತರ ನೀಡಿದ್ದು, ಕೂಡಲೇ ತಮ್ಮ ಇಲಾಖೆ ಅಧಿಕಾರಿಗಳನ್ನು ಗದಗ ನಗರಕ್ಕೆ ಕಳಿಸಿ ಪುಟ್ಟರಾಜ ಸ್ಮಾರಕ ಭವನ ಕಾಮಗಾರಿ ಪೂರ್ಣಗೊಳಿಸಲು ಬೇಕಾದ ಅಗತ್ಯ ಹಣದ ಮಾಹಿತಿ ಪಡೆದು ಆದಷ್ಟು ಶೀಘ್ರ ಹಣ ಬಿಡುಗಡೆ ಮಾಡುವುದಾಗಿ ಭರವಸೆ ನೀಡಿದ್ದಾರೆ.

## ಸಾರ್ವಜನಿಕರ ಗಮನಕ್ಕೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗಜೇಂದ್ರಗಡ ಪಟ್ಟಣದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ ಗಜೇಂದ್ರಗಡ ಪುರಸಭೆ ವ್ಯಾಪ್ತಿಯಲ್ಲಿ ಬರುವ ಪುರಸಭೆ ಮಾಲ್ಕಿ ನಾಗರಿಕ ಸೌಲಭ್ಯಕ್ಕೆ ಕಾಯ್ದಿರಿಸಿದ ಜಾಗೆಯನ್ನು ವಲಯ ಅರಣ್ಯ ಅಧಿಕಾರಿಗಳು, ಗದಗ ವಲಯ ಗದಗ ಈ ಇಲಾಖೆಗೆ ಕರ್ನಾಟಕ ಪುರಸಭೆ ಅಧಿನಿಯಮ ಹಾಗೂ ಅಧಿಸೂಚನೆ ಪ್ರಕಾರ ಪುರಸಭೆ ಸಾಮಾನ್ಯ ಸಭೆಯಲ್ಲಿ 30 ವರ್ಷದ ಅವಧಿಗೆ ಮೀರದ ಹಾಗೆ ಲೀಸ್ ಆಧಾರದ ಮೇಲೆ ನಿವೇಶನಗಳನ್ನು ಪ್ರಾದೇಶಿಕ ಅರಣ್ಯ ಇಲಾಖೆಯ ಕಚೇರಿಗಳ ನಿರ್ಮಾಣ ಮಾಡಲು ನಿವೇಶನ ಹಂಚಿಕೆ ಮಾಡಲು ಸಭೆಯಲ್ಲಿ ನಿರ್ಣಯಿಸಲಾಗಿದೆ. ಈ ಬಗ್ಗೆ ಯಾವುದಾದರೂ ಸಲಹೆ / ಸೂಚನೆ/ ಆಕ್ಷೇಪಣೆಗಳು ಇದ್ದಲ್ಲಿ ಪ್ರಕಟಣೆಗೊಂಡ 7 ದಿನದೊಳಗೆ ಲಿಖಿತವಾಗಿ ಪುರಸಭೆಗೆ ಸಲ್ಲಿಸಬಹುದಾಗಿದೆ ಎಂದು ಗಜೇಂದ್ರಗಡ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಘಟಾನುಘಟಿ ನಾಯಕರ ಪೈಪೋಟಿಯ ನಡುವೆ ಬಿಜೆಪಿ ಜಿಲ್ಲಾಧ್ಯಕ್ಷರಾಗಿ ತೋಟಪ್ಪ ಕುರಡಗಿ ಮರು ಆಯ್ಕೆ

# ಪಕ್ಷವನ್ನು ತಳಮಟ್ಟದಿಂದ ಬಲಪಡಿಸಲು ಶ್ರಮಿಸುವೆ

■ ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿಯ ಗದಗ ಜಿಲ್ಲಾ ಅಧ್ಯಕ್ಷರ ಸ್ಥಾನಕ್ಕೆ ಮಾಜಿ ಸಚಿವ ಸಿ.ಸಿ ಪಾಟೀಲ ಪುತ್ರ ಉಮೇಶಗೌಡ್ರ ಪಾಟೀಲ್, ಮಾಜಿ ಶಾಸಕ ಕಳಕಪ್ಪ ಬಂಡಿ ಸೇರಿದಂತೆ ಹಲವು ಘಟಾನುಘಟಿ ನಾಯಕರ ಪೈಪೋಟಿಯಿತ್ತು. ಅಂತಿಮವಾಗಿ ಹಿಂದಿನ ಜಿಲ್ಲಾಧ್ಯಕ್ಷ ತೋಟಪ್ಪ ಕುರುಡಗಿ (ರಾಜು) ಅವರನ್ನೇ ನೇಮಕ ಮಾಡಿ ಹೈಕಮಾಂಡ್ ಆದೇಶ ಹೊರಡಿಸಿದೆ.

ನಗರದ ಜಿಲ್ಲಾ ಬಿಜೆಪಿ ಕಾರ್ಯಾಲಯದಲ್ಲಿ ನೂತನ ಜಿಲ್ಲಾಧ್ಯಕ್ಷರ ಘೋಷಣೆ ಹಾಗೂ ಪದಗ್ರಹಣ ಸಮಾರಂಭ ಗುರುವಾರ ನಡೆಯಿತು. ಶಶಿಮೌಳಿ ಕುಲಕರ್ಣಿ ನೂತನ ಅಧ್ಯಕ್ಷರ ಹೆಸರನ್ನು ಘೋಷಿಸಿದರು. ಈ ವೇಳೆ ಬಿಜೆಪಿಯ ಮುಖಂಡರು ನೂತನ ಅಧ್ಯಕ್ಷರಿಗೆ ಶಾಲು ಹೊದಿಸಿ ಶುಭ ಕೋರಿದರು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಬಿಜೆಪಿಯ ಹಿರಿಯ ಮುಖಂಡ ಎಂ.ಎಸ್. ಕರಿಗೌಡ್ರ, ಗದಗ ಜಿಲ್ಲೆಯ 967 ಮತಗಟ್ಟೆಗಳಲ್ಲಿ ಸಕ್ರಿಯ ಸದಸ್ಯರನ್ನು ಆಯ್ಕೆ ಮಾಡಿದ್ದು, ಎಲ್ಲ ಬೂತ್‌ಗಳ ಕಮಿಟಿ, ಮಂಡಳ ಅಧ್ಯಕ್ಷರ ಚುನಾವಣೆಗಳನ್ನು ಈಗಾಗಲೇ ನಡೆಸಲಾಗಿದೆ.



ಜಿಲ್ಲೆಯಲ್ಲಿ ಒಟ್ಟು 994 ಸಕ್ರಿಯ ಸದಸ್ಯರನ್ನು ಆಯ್ಕೆ ಮಾಡಲಾಗಿದೆ. ಅಂತಿಮವಾಗಿ ಜಿಲ್ಲಾಧ್ಯಕ್ಷರನ್ನು ಘೋಷಣೆ ಮಾಡಿದ್ದು, ಮುಂಬರುವ ದಿನಗಳಲ್ಲಿ ರಾಜು ಕುರಡಗಿ ನೇತೃತ್ವದಲ್ಲಿ ಪಕ್ಷ ಇನ್ನಷ್ಟು ಬಲಗೊಳ್ಳಲಿ ಎಂದರು.

ಮಾಜಿ ಸಚಿವ ಕಳಕಪ್ಪ ಬಂಡಿ ಮಾತನಾಡಿ, ಭಾರತೀಯ ಜನತಾ ಪಕ್ಷದ ವ್ಯವಸ್ಥೆಯಲ್ಲಿ ಪ್ರತಿ ಮೂರು ವರ್ಷಕ್ಕೊಮ್ಮೆ ಜಿಲ್ಲಾಧ್ಯಕ್ಷರ ಚುನಾವಣೆ ಜರುಗುತ್ತದೆ. ಕಾಂಗ್ರೆಸ್ ಪಕ್ಷದಂತೆ ಒಬ್ಬರೇ 15-20 ವರ್ಷ ಅಧ್ಯಕ್ಷರಾಗುವ ವ್ಯವಸ್ಥೆ ಬಿಜೆಪಿಯಲ್ಲಿಲ್ಲ. ನೂತನ ಅಧ್ಯಕ್ಷರ ಘೋಷಣೆಯನ್ನು ಎಲ್ಲರೂ ಒಮ್ಮತವಾಗಿ ಒಪ್ಪಿಕೊಂಡು ಪಕ್ಷ ಬಲಪಡಿಸುವಲ್ಲಿ ಶ್ರಮಿಸಬೇಕು ಎಂದರು.

ಈ ಸಂದರ್ಭದಲ್ಲಿ ಅಶೋಕ ಹೆಬ್ಬಳ್ಳಿ, ನಿರ್ಮಲಾ ಕೊಳ್ಳಿ, ಸುರೇಶ ಮರಳಪ್ಪನವರ, ಬೂದಪ್ಪ ಹಳ್ಳಿ, ನಾಗನಗೌಡ ಕೆಂಗನಗೌಡ್ರ, ಸೋಮಲಿಂಗಪ್ಪ ಚರೇದ್, ಮಹೇಶ ಮುಸಕಿನಬಾವಿ, ಉಮೇಶ ಮಲ್ಲಾಪೂರ, ಯಲ್ಲಪ್ಪ ಹಾರೊಗೇರಿ, ಸುನಿಲ ಮಹಾಜನಶೆಟ್ಟರ್, ಹೇಮಗಿರಿಶ ಹಾವಿನಾಳ, ಸಂತೋಷ ಅಕ್ಕಿ, ಬಸವರಾಜ ಇಟಗಿ, ಮಂಜುನಾಥ ಮುಳಗುಂದ, ಈಶ್ವರಪ್ಪ ರಂಗಪ್ಪನವರ, ಸಿದ್ದೇಶ್ ಹೂಗಾರ, ಮಹಮ್ಮದ್ ಗೌಸ್ ತಾಲಿಮನವರ ಉಪಸ್ಥಿತರಿದ್ದರು.

ನೂತನ ಜಿಲ್ಲಾಧ್ಯಕ್ಷ ರಾಜು ಕುರುಡಗಿ ಪಕ್ಷದ ಸೇವೆ ಮಾಡಲು ಅವಕಾಶ ನೀಡಿದ ರಾಜ್ಯಾಧ್ಯಕ್ಷರು ಹಾಗೂ ಹಿರಿಯರಿಗೆ ಅಭಿನಂದನೆ ಸಲ್ಲಿಸಿ ಮಾತನಾಡಿ, ಕಳೆದ ಒಂದು ವರ್ಷದ ಅವಧಿಯಲ್ಲಿ ಪಕ್ಷಕ್ಕಾಗಿ ದುಡಿದಿದ್ದೇನೆ. ಲೋಕಸಭೆ ಚುನಾವಣೆಯಲ್ಲಿ ಬಿಜೆಪಿ ಗೆಲ್ಲಲು ಸಾಕಷ್ಟು ಶ್ರಮ ವಹಿಸಿದ್ದೇನೆ. 2028ರಲ್ಲಿ ನಡೆಯುವ ವಿಧಾನಸಭೆ ಚುನಾವಣೆಯಲ್ಲಿ ಜಿಲ್ಲೆಯ ನಾಲ್ಕು ಕ್ಷೇತ್ರ ಗೆಲ್ಲಲು ಕಾರ್ಯಕರ್ತರ ಜೊತೆಗೂಡಿ ಶ್ರಮವಹಿಸುತ್ತೇನೆ. ಜೊತೆಗೆ, ಪಕ್ಷವನ್ನು ತಳಮಟ್ಟದಿಂದ ಬಲಪಡಿಸುವಲ್ಲಿ ನಿರಂತರ ಚಟುವಟಿಯಲ್ಲಿ ಭಾಗವಹಿಸುತ್ತೇನೆ ಎಂದರು.

### ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಯೋಜನೆಗಳ ತಯಾರಿಕೆ ಪ್ರಕ್ರಿಯೆಯ ಬಲವರ್ಧನೆಗೊಳಿಸುವ ಕುರಿತ ಕಾರ್ಯಾಗಾರ

## ಅಭಿವೃದ್ಧಿ ಕಾಮಗಾರಿಗಳ ಸಂಪೂರ್ಣ ಅನುಷ್ಠಾನವಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಜಾಸತ್ತಾತ್ಮಕ ವ್ಯವಸ್ಥೆಯಲ್ಲಿ ಕಾನೂನು ಪಾಲನೆ ಮಾಡಬೇಕಾಗುತ್ತದೆ. ಜನಪರ ಹಿತದ ಸಲುವಾಗಿ ಅಧಿಕಾರ ವಿಕೇಂದ್ರೀಕರಣಕ್ಕಾಗಿ ಕ್ರಮ ಕೈಗೊಳ್ಳಲು ಹಿಂದೇಟು ಹಾಕಬಾರದು. ಅಭಿವೃದ್ಧಿ ಕಾಮಗಾರಿಗಳ ಸಂಪೂರ್ಣ ಅನುಷ್ಠಾನಕ್ಕಾಗಿ ತಾಲೂಕು ಮಟ್ಟದಲ್ಲಿಯೂ ಟಾಸ್ಕ್‌ಫೋರ್ಸ್ ಸಮಿತಿಗಳು ನಿಯಮಿತವಾಗಿ ಜರುಗಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಹೇಳಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಯೋಜನೆಗಳ ತಯಾರಿಕೆ ಪ್ರಕ್ರಿಯೆಯನ್ನು ಬಲವರ್ಧನೆಗೊಳಿಸುವ ಕುರಿತ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ನಿವೃತ್ತ ಮುಖ್ಯ ಕಾರ್ಯದರ್ಶಿ ಎಸ್. ಎಂ. ವಿಜಯಾನಂದ ಮಾತನಾಡಿ, ಸಂಬಂಧಿತ ಇಲಾಖಾಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿಗಳ ಕುರಿತು ಅರಿತುಕೊಳ್ಳುವುದು ಮುಖ್ಯವಾಗಿದೆ. ಗ್ರಾಮ ಸಭೆಗಳನ್ನು ಯಶಸ್ವಿಯಾಗಿ ನಡೆಸಬೇಕು.

▶▶ 3ನೇ ಪುಟಕ್ಕೆ

### ನದಾಫ್/ಪಿಂಜಾರ್ ಸಮುದಾಯದ ರಾಜ್ಯ ಕಾರ್ಯದರ್ಶಿ ಎಂ.ಎಂ. ಗಾಡಗೋಳಿ ಬೇಸರ

# ಅಲ್ಪಸಂಖ್ಯಾತರಾಗಿದ್ದರೂ ಸರ್ಕಾರಿ ಸೌಲಭ್ಯದಿಂದ ವಂಚಿತ

■ ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದಲ್ಲಿ ನದಾಫ್/ಪಿಂಜಾರ ಸಮುದಾಯದ ಸುಮಾರು 25 ಲಕ್ಷ ಜನಸಂಖ್ಯೆ ಇದ್ದು, ಹತ್ತಿಯಿಂದ ಹಾಸಿಗೆ, ದಿಂಬು, ಹಗ್ಗ, ಕಣ್ಣಿ ಇತ್ಯಾದಿ ಉತ್ಪನ್ನಗಳನ್ನು ಮಾಡಿ ಮಾರಾಟ ಮಾಡುವುದು ಜೀವನೋಪಾಯದ ದಾರಿಯಾಗಿದೆ. ನಮ್ಮ ಸಮಾಜದವರು ಅರೆ ಅಲೆಮಾರಿಗಳಾಗಿದ್ದು, ಆರ್ಥಿಕವಾಗಿ, ಶೈಕ್ಷಣಿಕವಾಗಿ, ರಾಜಕೀಯವಾಗಿ ಹಾಗೂ ಸಾಮಾಜಿಕವಾಗಿ ಅತ್ಯಂತ ಹಿಂದುಳಿದ ಸಮಾಜವಾಗಿದೆ. ಅಲ್ಪಸಂಖ್ಯಾತರಾಗಿದ್ದರೂ ಕೂಡ ಸರ್ಕಾರಿ ಸೌಲಭ್ಯದಿಂದ ವಂಚಿತರಾಗಿದ್ದೇವೆ ಎಂದು ರಾಜ್ಯ ನದಾಫ್/ಪಿಂಜಾರ್ ಸಮುದಾಯದ ರಾಜ್ಯ ಕಾರ್ಯದರ್ಶಿ ಎಂ.ಎಂ. ಗಾಡಗೋಳಿ ಬೇಸರ ವ್ಯಕ್ತಪಡಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ನಮ್ಮ ಸಮಾಜ ಅತ್ಯಂತ ಹಿಂದುಳಿದ ಸಮಾಜವೆಂದು ಸರ್ಕಾರ ಗುರುತಿಸಿ, 1993ರಲ್ಲಿ ವೃತ್ತಿ ಆಧಾರದ ಮೇಲೆ ಪ್ರವರ್ಗ-1ರಲ್ಲಿ ಮೀಸಲಾತಿಯನ್ನು ನೀಡಿದೆ. ನಮ್ಮ ಜನಾಂಗದವರು ಪ್ರವರ್ಗ-1ರಲ್ಲಿ ಇತರೆ 117 ಜಾತಿಯವರೊಂದಿಗೆ ಸ್ಪರ್ಧೆ ಮಾಡಿ ಶೇ.4ರ ಒಟ್ಟು ಮೀಸಲಾತಿಯಲ್ಲಿ ಸರ್ಕಾರಿ ಹುದ್ದೆಗೆ ಆಯ್ಕೆಯಾಗುವುದು ಕಷ್ಟಸಾಧ್ಯವಾಗಿದೆ. ಆದ್ದ-ರಿಂದ ನದಾಫ್/ಪಿಂಜಾರ ಜನಾಂಗದವರು ಇದುವರೆಗೆ ಲೋಕಸೇವಾ ಆಯೋಗದ ನೇರ ನೇಮಕಾತಿಯಲ್ಲಿ ಕೆಎಎಸ್ ಹುದ್ದೆಗೆ ಆಯ್ಕೆಯಾಗಿಲ್ಲ. ಕೇಂದ್ರದ ಐಎಎಸ್/ ಐಪಿಎಸ್‌ಗೂ ಸಹ ಆಯ್ಕೆಯಾಗಿಲ್ಲ ಎಂದು ತಮ್ಮ ಆಕ್ರೋಶ ಹೊರಹಾಕಿದರು.




ಕಳೆದ ಎರಡು ವರ್ಷಗಳಿಂದ ಸಂಬಂಧಪಟ್ಟ ಸಚಿವರಿಗೆ ಹಲವು ಬಾರಿ ಮನವಿಗಳನ್ನು ಸಲ್ಲಿಸಲಾಗಿತ್ತು. 2024ರಲ್ಲಿ ಹಾಗೂ 18-02-2025ರಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ 2025-26ನೇ ಸಾಲಿನ ಆಯವ್ಯಯ ಪೂರ್ವಭಾವಿ ಸಭೆಯನ್ನು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಸಹಭಾಗಿಯಾಗಿ ವಿಷಯವನ್ನು ಪ್ರಸ್ತಾಪಿಸಲಾಗಿತ್ತು ಹಾಗೂ ಮುಖ್ಯಮಂತ್ರಿಗಳಿಗೆ ಮನವಿಯನ್ನು ಮಾಡಿದರೂ ಪ್ರಯೋಜನವಾಗಿಲ್ಲ ಎಂದು ಎಂ.ಎಂ. ಗಾಡಗೋಳಿ ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಎಲ್ಲಾ ಜನತೆಗೆ 'ಸಮ ಪಾಲು ಸಮ ಬಾಳು' ಎಂದು ವಾಕ್ಯ ಘೋಷಣೆ ಮಾಡಿದ ಈ ಸರ್ಕಾರ ಅಲ್ಪಸಂಖ್ಯಾತರಲ್ಲಿ ಅತ್ಯಂತ ಹಿಂದುಳಿದ ನಮ್ಮ ನದಾಫ್/ಪಿಂಜಾರ ಸಮುದಾಯದವರಿಗೆ ನ್ಯಾಯ ದೊರಕಿಸುವಲ್ಲಿ ವಿಫಲವಾಗಿದೆ ಎಂದು ರಾಜ್ಯ ಸರ್ಕಾರದ ವಿರುದ್ಧ ತಮ್ಮ ಅಸಮಾಧಾನ ಹೊರ ಹಾಕಿದರು.

ಈ ವೇಳೆ ಕೆ.ಎಫ್ ಹಳ್ಯಾಳ, ಎಚ್.ಆರ್ ನದಾಫ್, ಶರೀಫಸಾಬ್ ನೂರಬಾಷಾ, ರಬ್ಬಾನಿ ಹುಲಕೋಟಿ, ಫಕ್ರುಸಾಬ್ ನದಾಫ್, ದಾವಲಸಾಬ್ ನದಾಫ್, ಶೌಕತ್ ಅಣ್ಣಿಗೇರಿ, ಎಂ.ಬಿ ನದಾಫ್, ರಂಜಾನಸಾಬ್ ನದಾಫ್ ಉಪಸ್ಥಿತರಿದ್ದರು.

## ಸಂಪಾದಕೀಯ

# ಗ್ಯಾರಂಟಿ ಉಸ್ತುವಾರಿ ಸಮಿತಿ ವಿಸರ್ಜನೆಗೆ ಇದು ಸೂಕ್ತ ಕಾಲ

ಪಂಚ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನಕ್ಕಾಗಿ ಕಾಂಗ್ರೆಸ್ ಸರ್ಕಾರ ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಗ್ಯಾರಂಟಿ ಮೇಲ್ವಿಚಾರಣ ಸಮಿತಿಗಳನ್ನ ರಚನೆ ಮಾಡಿದೆ. ಆ ಸಮಿತಿಯ ಜಿಲ್ಲಾಧ್ಯಕ್ಷರಿಗೆ ಮಾಸಿಕ 40,000 ಹಾಗೂ ತಾಲೂಕು ಸಮಿತಿ ಅಧ್ಯಕ್ಷರಿಗೆ 25,000 ಗೌರವ ಧನ ನೀಡಲಾಗುತ್ತಿದೆ.

ಕಾಂಗ್ರೆಸ್ ಕಾರ್ಯಕರ್ತರಿಗೆ ಜವಾಬ್ದಾರಿ ಕೊಟ್ಟಿರುವ ಈ ಗ್ಯಾರಂಟಿ ಸಮಿತಿಗಳ ಬಗ್ಗೆ ಪ್ರತಿಪಕ್ಷಗಳ ಅಪಸ್ವರ ಎದ್ದಿವೆ. ಗ್ಯಾರಂಟಿ ಸಮಿತಿಯಿಂದ ಶಾಸಕರಿಗೆ ಬೆಲೆ ಇಲ್ಲದಂತಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್ ಅಶೋಕ್ ಆರೋಪಿಸಿದ್ದಾರೆ.

ಎರಡು ದಿನಗಳ ಹಿಂದೆ ವಿಧಾನಸಭೆಯಲ್ಲಿ ಈ ವಿಷಯವಾಗಿ ಭಾರಿ ಕೋಲಾಹಲ ಸೃಷ್ಟಿಯಾಗಿದೆ. ಆದರೆ ಎಂದಿನಂತೆ ತಮ್ಮ ಗಟ್ಟಿ ನಿರ್ಧಾರವನ್ನು ಮತ್ತೊಮ್ಮೆ ತಿಳಿಸಿದ ಸಿದ್ದರಾಮಯ್ಯ, ಯಾವುದೇ ಕಾರಣಕ್ಕೂ ಗ್ಯಾರಂಟಿ ಸಮಿತಿಗಳನ್ನ ರದ್ದುಪಡಿಸುವುದಿಲ್ಲ ಎಂದಿದ್ದಾರೆ.

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು ಸುಮಾರು ಎರಡು ವರ್ಷಗಳಾಗುತ್ತಿವೆ. ಗ್ಯಾರಂಟಿ ಕಾರ್ಯಕ್ರಮಗಳು ರಾಜ್ಯದ ಶೇ. 98ರಷ್ಟು ಜನರಿಗೆ ತಲುಪಿದೆ ಎಂದು ಸರ್ಕಾರ ಹೇಳಿಕೊಳ್ಳುತ್ತಿದೆ.

ಹಾಗಿದ್ದರೆ ಗ್ಯಾರಂಟಿ ಸಮಿತಿಗಳಿಗೆ ಕೆಲಸವೇ ಇಲ್ಲ. ಆದರೂ ಗ್ಯಾರಂಟಿ ಕಾರ್ಯಕ್ರಮಗಳ ಸಮರ್ಪಕ ಅನುಷ್ಠಾನದ ಉಸ್ತುವಾರಿ ಕೊಟ್ಟಿರುವುದು ಕಾಂಗ್ರೆಸ್ ಕಾರ್ಯಕರ್ತರನ್ನ ಸಂತುಷ್ಟ ಪಡಿಸಲು ಮಾತ್ರ ಎನ್ನುವುದು ಸ್ಪಷ್ಟವಾಗುತ್ತದೆ.

ಗ್ಯಾರಂಟಿ ಕಾರ್ಯಕ್ರಮಗಳು ಜನರಿಗೆ ತಲುಪಿವೆ ಎಂದಾದರೆ ಈ ಸಮಿತಿಗಳನ್ನ ವಿಸರ್ಜಿಸಿ. ಶಾಸಕಾಂಗ ರೂಪಿಸಿದ ಕೆಲಸ ಮಾಡುವುದಕ್ಕಾಗಿಯೇ ಇರುವ ಕಾರ್ಯಾಂಗಕ್ಕೆ ಆ ಜವಾಬ್ದಾರಿ ನೀಡಲು ಇದು ಸಕಾಲ. ಇಲ್ಲದಿದ್ದರೆ ಗ್ಯಾರಂಟಿ ಕಾರ್ಯಕ್ರಮಗಳು ಇನ್ನು ಜನರಿಗೆ ತಲುಪಿಲ್ಲ ಎಂದು ಸರ್ಕಾರ ಒಪ್ಪಿಕೊಳ್ಳಲಿ.

### ಬೇಡಿದವರಿಗೆ ಬೇಡಿದ್ದನ್ನು ಕರುಣಿಸುವ ನವಲಗುಂದ ರಾಮಲಿಂಗ ಕಾಮಣ್ಣ ದೇವರು

# ರಾಜ್ಯದಲ್ಲಿಯೇ ವಿಶಿಷ್ಟವಾದ ಕಾಮಣ್ಣದೇವರು

ಧಾರವಾಡ ಜಿಲ್ಲೆಯ ನವಲಗುಂದದ ರಾಮಲಿಂಗೇಶ್ವರ ಕಾಮದೇವರು ಇಷ್ಟಾರ್ಥ ಸಿದ್ಧಿಸುವ ದೈವವಾಗಿದ್ದಾನೆ. ಬೇಡಿದವರಿಗೆ ಬೇಡಿದ್ದನ್ನು ಕರುಣಿಸುವ ಕಲಿಯುಗದ ಕಾಮಧೇನು ಎಂಬ ಖ್ಯಾತಿಯೂ ಇದೆ. ರಾಜ್ಯದ ವಿವಿಧ ಭಾಗಗಳಲ್ಲಿ ಆಚರಿಸುವ ಹೋಳಿ ಆಚರಣೆ ಹಾಗೂ ನವಲಗುಂದ ರಾಮಲಿಂಗ ಕಾಮದೇವರಿಗೂ ಸಾಕಷ್ಟು ವ್ಯತ್ಯಾಸವಿದೆ, ಅಷ್ಟೇ ಮಹತ್ವವಿದೆ. ಇಲ್ಲಿ ವಿಶಿಷ್ಟ ಆಚರಣೆ ಮೂಲಕ ಕಾಮದೇವರನ್ನು ಪೂಜಿಸಲಾಗುತ್ತದೆ.

ಕೇವಲ ಬಣ್ಣ, ಓಕುಳಿ, ಹಲಗೆ ವಾದನಕ್ಕಷ್ಟೇ ಸೀಮಿತಗೊಳ್ಳದೇ ಭಯ, ಭಕ್ತಿಗೆ ಒಲಿವ, ಭಕ್ತರ ಇಷ್ಟಾರ್ಥಗಳನ್ನು ದಯಪಾಲಿಸುವ ಮಹಿಮಾನ್ವಿತ ದೈವ, ಸಂತಾನಹೀನರಿಗೆ ಸಂತಾನಭಾಗ್ಯ, ಅನಾರೋಗ್ಯ ಪೀಡಿತರಿಗೆ ಆರೋಗ್ಯ ಭಾಗ್ಯ ನೀಡುತ್ತಾನೆ. ಭಕ್ತಿಯಿಂದ ಭಜಿಸುವವರಿಗೆ ಈತ ಅಕ್ಷರಶಃ ಕಾಮಧೇನು ಕಲ್ಪವೃಕ್ಷ ಆಗಿದ್ದಾನೆ ಎನ್ನುತ್ತಾರೆ ಭಕ್ತರು.

ನವಲಗುಂದದಲ್ಲಿ ಹೋಳಿ ಹುಣ್ಣಿಮೆ ದಿನ ಹಬ್ಬದ ವಾತಾವರಣ ನಿರ್ಮಾಣವಾಗುತ್ತದೆ. ಹೋಳಿ ಹುಣ್ಣಿಮೆಗೂ ಮೊದಲು ಬರುವ ಏಕಾದಶಿ ರಾತ್ರಿ ರಾಮಲಿಂಗ ಕಾಮಣ್ಣ ದೇವರ ಪ್ರತಿಷ್ಠಾಪನೆಯಾಗಲಿದ್ದು, ಭಕ್ತರು ತಮ್ಮ ಇಷ್ಟಾರ್ಥ ಸಿದ್ದಿಗಾಗಿ ಭಯ, ಭಕ್ತಿ, ಶ್ರದ್ಧೆಯಿಂದ ಆಗಮಿಸಿ ಕಾಮಣ್ಣ ದೇವರ ದರ್ಶನ ಪಡೆಯುತ್ತಾರೆ. ಹಿಂದೂ-ಮುಸ್ಲಿಂ ಬಾಂಧವರು ಸೇರಿಕೊಂಡು ಹಿಂದೂ ಪದ್ಧತಿಯಂತೆ ಹಗಲಿರುಳೆನ್ನದೇ, ಶ್ರಮವಹಿಸಿ ಪ್ರತಿಷ್ಠಾಪನೆಯಿಂದ ಹಿಡಿದು ಕಾಮದಹನದವರೆಗೂ ಸೇವೆ ಸಲ್ಲಿಸುತ್ತಾರೆ. ಪ್ರತಿಯೊಂದು ಓಣಿಯಲ್ಲಿ ಪ್ರತಿಷ್ಠಾಪಿಸಿದ ಕಾಮಣ್ಣಗಳಲ್ಲಿ ಇಷ್ಟಾರ್ಥ ಪೂರೈಸಿಕೊಳ್ಳಲು ಮಹಿಳೆಯರು ಉಪವಾಸ ವೃತ ಮಾಡಿ, ಭಕ್ತಿಯಿಂದ ಪೂಜಿಸಿ ಹರಕೆ ತೀರಿಸುತ್ತಾರೆ.

ನವಲಗುಂದದಲ್ಲಿ ಕಾಮದೇವನ ಸ್ಥಾಪನೆ, ಹೋಳಿ ಹಬ್ಬ ಆಚರಣೆ ರಾಜ್ಯದಲ್ಲಿಯೇ ವಿಶಿಷ್ಟ ರೀತಿಯದು. ಜನರು ಶಿವ ಪಾರ್ವತಿಯನ್ನು ಪೂಜಿಸುವುದು ಸಾಮಾನ್ಯ. ಆದರೆ, ಇಲ್ಲಿ ತಮ್ಮ ಇಷ್ಟಾರ್ಥಗಳನ್ನು ಈಡೇರಿಸಿಕೊಳ್ಳಲು ಕಾಮ ದೇವರ ಉಪಾಸನೆಯನ್ನು ಮಾಡುವುದು ಇಲ್ಲಿನ ವೈಶಿಷ್ಟ್ಯ. ಐದು ದಿನಗಳವರೆಗೆ ನವಲಗುಂದದ ರಾಮಲಿಂಗ ಕಾಮಣ್ಣ ದೇವರ ದರ್ಶನಕ್ಕೆ ದೇಶ, ವಿದೇಶಗಳಿಂದಲೂ ಭಕ್ತರ ದಂಡೇ ಹರಿದು ಬರುತ್ತಿದೆ. ಇಲ್ಲಿನ ರಾಮಲಿಂಗ ಕಾಮಣ್ಣ ದೇವರು ರಾಜ್ಯದಲ್ಲಿ ವಿಶೇಷತೆ ಪಡೆದಿದೆ.

ಸವಣೂರು ನವಾಬರ ಆಡಳಿತಾವಧಿಯಲ್ಲಿ ಸಿದ್ಧಿಪುರುಷನೊಬ್ಬ ವಿಶೇಷ ನಕ್ಷತ್ರ ದಿನದಂದು ವಿವಿಧ ಬಗೆಯ ಗಿಡಮೂಲಿಕೆ ಕಟ್ಟಿಗೆಗಳನ್ನು ಆಯ್ದು ತಂದು ಕಾಮಕಾಷ್ಠ ಮೂರ್ತಿ ರಚಿಸಲು ಸಿದ್ಧನಾದನಂತೆ. ಇದೇ ವೇಳೆ, 99 ಗಿಡಮೂಲಿಕೆ ಕಟ್ಟಿಗೆಗಳಿಂದ ಮೂರ್ತಿ ಪ್ರತಿಷ್ಠಾಪಿಸಲು



ಸಂಕಲ್ಪಕ್ಕೆ ಮುಂದಾದನು. ಆದರೆ, ಇನ್ನೊಂದು ಗಿಡಮೂಲಿಕೆ ಕಟ್ಟಿಗೆ ಸಿಕ್ಕಿದ್ದರೆ ಆತನ ಲೌಕಿಕ ಸಂಕಲ್ಪದ ಮೂರ್ತಿಗೆ ಜೀವಕಳೆ ಬರುತ್ತಿತ್ತು ಎಂಬ ಪ್ರತೀತಿ ಇದೆ. ಅಷ್ಟರಲ್ಲಿ ದೈವ ಪುರುಷ ದೈವಾಧೀನನಾದರೆಂದು ಹೇಳುತ್ತಾರೆ. ಇನ್ನೊಂದು ಮೂಲಿಕೆ ಜೋಡಣೆಗಾಗಿ ಆತ ಕೊರೆದ ರಂಧ್ರವನ್ನು ಇಂದಿಗೂ ರಾಮಲಿಂಗ ದೇವರಲ್ಲಿ ಕಾಣಬಹುದಾಗಿದೆ. ನೂರಾರು ವರ್ಷದ ಹಿಂದೆ ಸಿದ್ಧಿಪುರುಷನ ಹಸ್ತದಿಂದ ತಯಾರಿಸಿದ ಮೂರ್ತಿಯನ್ನು ನವಲಗುಂದ ಪಟ್ಟಣಕ್ಕೆ ಯಾರು ಬರಮಾಡಿಕೊಂಡರು ಎಂಬುದು ಇಂದಿಗೂ ನಿಗೂಢವಾಗಿಯೇ ಉಳಿದಿದೆ.

ರಾಮಲಿಂಗೇಶ್ವರ ಕಾಮದೇವರು ಬೇಡಿದವರಿಗೆ ಬೇಡಿದ್ದನ್ನು ಕರುಣಿಸುವ ಕರುಣಾಳು ಆಗಿದ್ದಾನೆ. ಸಂತಾನವಿಲ್ಲದ ದಂಪತಿಗಳಿಗೆ ಸಂತಾನ ಭಾಗ್ಯ ಕರುಣಿಸಲು ರಾಮಲಿಂಗ ತೊಟ್ಟಿಲು, ಕಂಕಣ ಭಾಗ್ಯಕ್ಕಾಗಿ ಬೆಳ್ಳಿಯ ಬಾಸಿಂಗ, ಅನಾರೋಗ್ಯ ನಿವಾರಣೆಗೆ ಬೆಳ್ಳಿ ಕುದುರೆ, ಮನೆ ವಸತಿ ಇಲ್ಲದವರು ಛತ್ರಿ ಛಾಮರ, ಉದ್ಯೋಗ ಬದುಕಿಗೆ ನೆಲೆ ಕಂಡುಕೊಳ್ಳಬೇಕಾದರೆ, ಬೆಳ್ಳಿ ಪಾದ ಅಥವಾ ಕುದುರೆ ಹರಕೆ ಹೊತ್ತು ಪೂಜಿಸಿದರೆ ಅವರ ಬೇಡಿಕೆ ಖಂಡಿತ ಈಡೇರುತ್ತದೆ ಎಂಬ ಪ್ರತೀತಿ ಇದೆ.

ಇಷ್ಟಾರ್ಥ ಸಿದ್ಧಿ ಕಲ್ಪಿಸಿದ ನಂತರ ಇನ್ನೊಂದು ಬೆಳ್ಳಿ ಸಾಮಗ್ರಿ ಕಾಮಣ್ಣನಿಗೆ ಸಮರ್ಪಿಸಬೇಕು. ಹರಕೆ ತೀರಿಸುವ ಭಕ್ತರಿಗೆ ಸಂಘಟಕರೇ ಶುಲ್ಕ ವಿಧಿಸಿ ಪೂಜೆ ಪೂರೈಸುತ್ತಾರೆ. ರಾಜ್ಯ ಹೊರರಾಜ್ಯದಿಂದ ಆಗಮಿಸುವ ಅಪಾರ ಭಕ್ತರು, ರಾಮಲಿಗೇಶ್ವರ ದೇವಸ್ಥಾನದಿಂದ ಸುಮಾರು ಎರಡು ಕಿ.ಮೀ ದೂರದವರೆಗೆ ಸರತಿ ಸಾಲಿನಲ್ಲಿ ನಿಂತು ಸುಡು ಬಿಸಿಲು ಎನ್ನದೇ ದರ್ಶನ ಪಡೆಯುತ್ತಾರೆ.

ಹೋಳಿ ಹುಣ್ಣಿಮೆ ಮರುದಿನ ರಾಮಲಿಂಗ ಕಾಮಣ್ಣನ ಮೆರವಣಿಗೆ ನಡೆಸಿ ಬೆಳಗ್ಗೆ ಕಾಮದಹನ ಮಾಡುತ್ತಾರೆ. ಇದೇ ಸಂದರ್ಭದಲ್ಲಿ ರಾಮಲಿಂಗ ಕಾಮಣ್ಣ ದೇವರ ಮೂಲ ಮೂರ್ತಿ ತೆಗೆದು ಅದರ ಬದಲಾಗಿ ಗಡಿಗೆ ಹಾಕಿ ಅಗ್ನಿಸ್ಪರ್ಶ ಮಾಡಲಾಗುತ್ತದೆ. ದಹನಗೊಳ್ಳುತ್ತಿರುವ ಕಾಮಣ್ಣನ ಗಡಿಗೆ ಮುಂದೆ ಬಿದ್ದರೆ ಮುಂಗಾರು ಉತ್ತಮ ಫಸಲು, ಹಿಂದೆ ವಾಲಿದರೆ ಹಿಂಗಾರು ಫಸಲು ಉತ್ತಮವಾಗಿ ಬರುತ್ತದೆ ಎಂಬ ನಂಬಿಕೆ ಇಂದಿಗೂ ರೈತರು ಹಾಗೂ ಭಕ್ತರಲ್ಲಿದೆ.

ನವಲಗುಂದ ರಾಮಲಿಂಗೇಶ್ವರ ಕಾಮದೇವರಿಗೆ ಪೂಜಾರಿಗಳೇ ಇಲ್ಲ. ಪ್ರತಿಯೊಂದು ದೇವಸ್ಥಾನದಲ್ಲಿ ಒಬ್ಬ ಪೂಜಾರಿ ಅಥವಾ ಪುರೋಹಿತನಿರುತ್ತಾನೆ. ಆದರೆ, ರಾಮಲಿಂಗ ದೇವಸ್ಥಾನದಲ್ಲಿರುವ ಕಾಮಣ್ಣನಿಗೆ ಯಾವುದೇ ಪೂಜಾರಿ ಇಲ್ಲದಿರುವುದು ವಿಶೇಷ. ಹೋಳಿ ಹುಣ್ಣಿಮೆ ಪೂಜಾ ವಿಧಿ, ವಿಧಾನದಲ್ಲಿಯೂ ಕೂಡ ಮಂತ್ರ ಘೋಷಣೆ, ಅರ್ಚನೆಯೂ ಇಲ್ಲ. ಭಕ್ತರೇ ಪೂಜೆ ಸಲ್ಲಿಸಿ ಹರಕೆ ಹೊರುವ ಸಂಪ್ರದಾಯ ಇಲ್ಲಿದೆ.

ನವಲಗುಂದಕ್ಕೆ ಆಗಮಿಸುವ ಭಕ್ತರ ಹರಕೆ ಈಡೇರಿದ ಉದಾಹರಣೆಗಳು ಹೆಚ್ಚು. ರಾಜ್ಯ ಅಲ್ಲದೇ, ಅನ್ಯ ರಾಜ್ಯದ ಲಕ್ಷಾಂತರ ಭಕ್ಯರು ಆಗಮಿಸಿ ತಮ್ಮ ಹರಕೆಗಳನ್ನು ಹೊತ್ತು ಬೆಳ್ಳಿ ವಸ್ತು ತೆಗೆದುಕೊಂಡು ಹೋಗಿ ತಮ್ಮ ಇಷ್ಟಾರ್ಥ ಸಿದ್ಧಿಗಾಗಿ ಪೂಜೆ ಸಲ್ಲಿಸುತ್ತಾರೆ ಎಂಬುದು ಭಕ್ತರ ಅಭಿಪ್ರಾಯ. ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವ ನವಲಗುಂದ ರಾಮಲಿಂಗೇಶ್ವರ ಕಾಮಣ್ಣದೇವರ ದರ್ಶನ ಪಡೆಯುವ ಭಾಗ್ಯ ನಿಮ್ಮದಾಗಲಿ.



– ವಿನಾಯಕ, ಎಸ್.ಎಸ್.
ಗದಗ.

# ಮಾನಸಿಕ ನೆಮ್ಮದಿಗೆ ಧರ್ಮ, ಸಂಸ್ಕಾರ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಹಿಳೆಯರು, ದೀನ-ದುರ್ಬಲರು ಹಾಗೂ ಬಡವರ ನೋವನ್ನು ನಿವಾರಿಸಿ ಕರ್ಮವನ್ನು ಕಿತ್ತು-ಧರ್ಮವನ್ನು ಬಿತ್ತಿ, ಬದುಕನ್ನು ಬಂಗಾರಗೊಳಿಸಿದ ಕಾರುಣ್ಯ ಸಿಂಧು ಆದಿ ಜಗದ್ಗುರು ರೇಣುಕಾಚಾರ್ಯರು ವಿಶ್ವ ಮಾನವ ಸಂದೇಶ ಸಾರಿದ್ದಾರೆ ಎಂದು ತಹಸೀಲ್ದಾರ ವಾಸುದೇವ ಸ್ವಾಮಿ ಹೇಳಿದರು.

ಅವರು ತಹಸೀಲ್ದಾರ ಕಚೇರಿಯಲ್ಲಿ ಜಗದ್ಗುರು ರೇಣುಕಾಚಾರ್ಯರ ಜಯಂತ್ಯುತ್ಸವ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬದುಕಿನ ಶ್ರೇಯಸ್ಸಿಗೆ ಸತ್ಯ, ಅಹಿಂಸೆ, ಬ್ರಹ್ಮಚರ್ಯ, ದಯಾ, ಕ್ಷಮಾ ಇತ್ಯಾದಿ ದಶವಿಧ ಧರ್ಮ ಸೂತ್ರಗಳು ಮತ್ತು ಮಾನವೀಯತೆಯ ಆದರ್ಶ ಚಿಂತನಗಳು ಬದುಕಿ ಬಾಳುವ ಜನಾಂಗಕ್ಕೆ ದಾರಿದೀಪವಾಗಿವೆ. ಪಾಲಕರು ಮಕ್ಕಳಿಗೆ ಧರ್ಮ, ಸಂಸ್ಕಾರ, ಪರಂಪರೆ-ಆಚರಣೆ, ಪದ್ಧತಿಗಳ ಬಗ್ಗೆ ತಿಳಿಸಬೇಕು.



ವಿಜ್ಞಾನ ಎಷ್ಟೇ ಬೆಳೆದರೂ ಮನುಷ್ಯನ ಮಾನಸಿಕ ನೆಮ್ಮದಿಗೆ ಧರ್ಮ, ಸಂಸ್ಕಾರ ಅಗತ್ಯ. ಈ ಮಾನವ ಕುಲಕೋಟಿಗೆ ಧರ್ಮ-ಸಂಸ್ಕಾರ ನೀಡಿ, ವಿಶ್ವ ಬಂಧುತ್ವ ಸಾರಿ ವೀರಶೈವ ಧರ್ಮದಲ್ಲಿ ಧಾರ್ಮಿಕ, ಸಾಮಾಜಿಕ ಮೌಲ್ಯಗಳನ್ನು ಬಿತ್ತಿದ ಕೀರ್ತಿ ಜ.ರೇಣುಕಾಚಾರ್ಯರಿಗೆ ಸಲ್ಲುತ್ತದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಬಿ.ಎಸ್. ಬಾಳೇಶ್ವರಮ್ಮಠ, ವೀರಭದ್ರಯ್ಯ ಹಿರೇಮಠ, ಬಿ.ಟಿ. ಪಾಟೀಲ ಮಾತನಾಡಿದರು. ಈ ವೇಳೆ ಪುಟಾಣಿ ಅಮೃತಾ ಪಾಟೀಲ ಜ.ರೇಣುಕಾಚಾರ್ಯರ ವೇಷಭೂಷಣದಲ್ಲಿ ಗಮನ ಸೆಳೆದಳು. ಗ್ರೇಡ್-2 ತಹಸೀಲ್ದಾರ ಮಂಜುನಾಥ ಅಮಾಸಿ, ಶಿರಸ್ತೇದಾರ ಜೆ.ಎ. ಮನಿಯಾರ್, ಆಹಾರ ನಿರೀಕ್ಷಕ ಜಗದೀಶ ಕುರುಬರ, ಶಿವಯೋಗಿ ಗಡ್ಡದೇವರಮಠ, ವೀರಭದ್ರಯ್ಯ ಹಿರೇಮಠ, ಸಿ.ಆರ್. ಲಕ್ಕುಂಡಿಮಠ, ಎನ್.ವಿ. ಹೇಮಗಿರಿಮಠ, ರಾಜು ಅಂದಲಗಿ, ಎಸ್.ಬಿ. ಅಳಗುಂಡಗಿ, ಸಂತೋಷ ಬಾಳಿಕಾಯಿ, ಸೋಮಯ್ಯ ಕಲ್ಮಠ, ಶಂಕ್ರಯ್ಯ ಪೂಜಾರ, ಮುರುಘೇಂದ್ರಸ್ವಾಮಿ ಹಿರೇಮಠ, ಮಲ್ಲಯ್ಯ ಭಕ್ತಿಮಠ, ಪಂಚಾಕ್ಷರಯ್ಯ ಸಾಲಿಮಠ, ರುದ್ರುಮುನಿ ಘಂಟಾಮಠ, ನೀಲಕಂಠಯ್ಯ ವೀರಕ್ತಮಠ, ಮಂಜುನಾಥ ಮುಳುಗುಂದ, ಯಲ್ಲಪ್ಪ ಚಕ್ರಸಾಲಿ, ನೀಲಕಂಠಯ್ಯ ಹಿರೇಮಠ, ಎಸ್.ಜೆ. ಪುರಾಣಿಕಮಠ, ಮಹೇಶ್ವರಯ್ಯ ಹಿರೇಮಠ, ಗಂಗಾಧರಯ್ಯ ಶಿಗ್ಲಿಮಠ, ರಶ್ಮಿಕಾ ಪಾಟೀಲ ಸೇರಿದಂತೆ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳಿದ್ದರು.

# ರಂಗಕಲಾವಿದರನ್ನು ನೆನಪಿಸಿದ ಪ್ರದರ್ಶನ

■ ವಿಜಯಸಾಕ್ಷಿ ಸುದ್ದಿ, ಗೋಕಾಕ

ಮರಳಿ ಬಾರದ ಲೋಕಕ್ಕೆ ಹೋದವರನ್ನು ತಮ್ಮ ಸಂಗ್ರಹದ ಅಭಿರುಚಿಯಲ್ಲಿ ಕಟ್ಟಿಹಾಕಿ, ಮುಂದಿನ ಯುವ ಕಲಾ ಪೀಳಿಗೆಗೆ ತಿಳಿಸಲು ಏರ್ಪಡಿಸುವ ಪ್ರದರ್ಶನ ಅವರ ಅಮೋಘ ಸಾಧನೆಯನ್ನು ಬೆಳೆಸಲಿ, ಕಲಾವಿದರ ಜೊತೆ ಅವರ ಹೆಸರು ಚಿರಕಾಲ ಉಳಿಯಲಿ ಎಂದು ವಿಜಯಪುರದ ಲೇಖಕ, ರಂಗ ನಿರ್ದೇಶಕ ಎಸ್.ಎಮ್. ಖೇಡಗಿ ಹೇಳಿದರು.



ಆಶಾಕಿರಣ ಕಲಾ ಟ್ರಸ್ಟ್ ಬೆಂಗಳೂರು, ಹಿರಿಯ ರಂಗಭೂಮಿ ಕಲಾವಿದರಾದ ಮೈಸೂರು ಮಾಲತಿಶ್ರೀ ಇವರ ನೇತೃತ್ವದಲ್ಲಿ ನಡೆದ ಗೋಕಾವಿ ನಾಡಿನ ವೃತ್ತಿರಂಗಭೂಮಿ ಹಿರಿಯ ಕಲಾವಿದರಾದ ದಿ. ಬಿ.ಆರ್. ಅರಿಷಿಣಗೋಡಿ ಹಾಗೂ ದಿ. ಬಸವಣ್ಣೆಪ್ಪ ಹೊಸಮನಿ ರಂಗಸ್ಮರಣೋತ್ಸವ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಗದುಗಿನ ಚಿತ್ರಕಲಾವಿದ ಶಂಕರಗೌಡ ಪಾಟೀಲ ಅವರು ಸಂಗ್ರಹಿಸಿರುವ ರಂಗಭೂಮಿ ಕಲಾವಿದರ ಛಾಯಾಚಿತ್ರ ಹಾಗೂ ಹಳೆಯ ಲೇಖನಗಳ ಪ್ರದರ್ಶನ ವೀಕ್ಷಿಸಿ ಅವರು ಮಾತನಾಡಿದರು.

ಕಾರ್ಯಕ್ರಮದ ಉದ್ಘಾಟನೆ ಹಾಗೂ ಪ್ರಶಸ್ತಿ ಪ್ರದಾನ ನೆರವೇರಿಸಿದ ಲೋಕೋಪಯೋಗಿ ಸಚಿವರು ಹಾಗೂ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ, ವೇ.ಮೂ. ಡಾ. ಮಹಾಂತೇಶ ಶಾಸ್ತ್ರೀಗಳು ಆರಾಧ್ರಿಮಠ ಬೈಲಹೊಂಗಲ, ರಂಗಭೂಮಿ ಹಾಗೂ ಕಿರುತೆರೆ ಕಲಾವಿದರಾದ ಶ್ರೀನಾಥ್ ವಶಿಷ್ಠ, ತಹಸೀಲ್ದಾರ ಡಾ. ಮೋಹನ ಭಸ್ಮೆ, ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷ ಸಿದ್ದಲಿಂಗ ದಳವಾಯಿ, ಅಶೋಕ ಪೂಜೇರಿ, ಮಹಾಂತೇಶ ಗಂ.ತಾಂವಶಿ, ರಜನಿ ಜಿರಗ್ಯಾಳ ಹಾಗೂ ಸಾರ್ವಜನಿಕರು ಪ್ರದರ್ಶನ ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

# 'ಬಹುಜನ' ಎಂದರೆ ಬಿಜೆಪಿಗೆ ಹಿಂದೂಗಳು, ನಮಗೆ ದುಡಿಯುವ ಜನ: ಮೀನಾಕ್ಷಿ ಸುಂದರಂ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

"ಬಹುಜನರೆಂದರೆ ಬಿಜೆಪಿಗೆ ಹಿಂದೂಗಳು; ನಮಗೆ ಬಹುಜನರೆಂದರೆ ಈ ದೇಶದ ದುಡಿಯುವ ಜನ. ಮಧ್ಯಮ ವರ್ಗದ ಹಿಂದೂಗಳನ್ನು ಕೇಂದ್ರ ಬಜೆಟ್ ಮೂಲಕ ಓಲೈಸಲಾಗುತ್ತಿದೆ, ಮಾಧ್ಯಮಗಳಲ್ಲೂ ಅದೇ ರೀತಿ ಬಿಂಬಿಸಲಾಗುತ್ತಿದೆ" ಎಂದು ಕಾರ್ಮಿಕ ಮುಖಂಡರಾದ ಮೀನಾಕ್ಷಿ ಸುದರಂ ಹೇಳಿದರು.

ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆಯುತ್ತಿರುವ 'ಜನ ಚಳವಳಿಗಳ ಬಜೆಟ್ ಅಧಿವೇಶನ'ದ ಎರಡನೇ ದಿನದ ಮೊದಲ ಗೋಷ್ಠಿಯಲ್ಲಿ ಮಾತನಾಡಿದ ಅವರು, "ಕೇಂದ್ರ ಹಾಗೂ ರಾಜ್ಯದ ಬಜೆಟ್ ಎರಡೂ ನಮ್ಮ ಮುಂದಿವೆ; ದೇಶದ ಶ್ರಮಜೀವಿಗಳು ಹಾಗೂ ದುಡಿಯುವ ಜನರ ಪರವಾಗಿ ಒಕ್ಕೂಟ ಸರ್ಕಾರ-ಕರ್ನಾಟಕ ಬಜೆಟ್‌ನಲ್ಲಿ ಏನು ಮಾಡಬೇಕು ಎಂಬ ಬಗ್ಗೆ ಹಲವು ವರ್ಷಗಳಿಂದ ಮಾತನಾಡುತ್ತಿದ್ದೇವೆ. ಬಜೆಟ್ ಪೂರ್ವ ಸಭೆಗಳಲ್ಲಿ ನಮ್ಮ ಸಲಹೆಗಳನ್ನು ಸರ್ಕಾರಕ್ಕೆ ಕೊಟ್ಟಿದ್ದೇವೆ. ದೇಶದ ಎಲ್ಲರನ್ನೂ ಒಳಗೊಂಡ ಬಜೆಟ್ ಹಾಗೂ ನೀತಿಗಳು ಬಿಂಬಿತ ಆಗಬೇಕು ಎಂಬುದು ನಮ್ಮ ಉದ್ದೇಶ. ಆದರೆ, ಆಗುತ್ತಿಲ್ಲ" ಎಂದರು.

"ಕೇಂದ್ರದ ಬಜೆಟ್ ದೇಶದ ದುಡಿಯುವ ಜನರಲ್ಲಿ ಬದಲಾವಣೆ ತರುತ್ತದೆ ಎಂಬ ನಿರೀಕ್ಷೆ ಏನೂ ಇರಲಿಲ್ಲ. ದೇಶದ ಬಹುಜನರಿಗೆ ಮಾನ್ಯತೆ ನೀಡುವುದಿಲ್ಲ ಎಂಬುದು ಸ್ಪಷ್ಟವಾಗಿದೆ. ಏಕೆಂದರೆ, ಬಿಜೆಪಿ ಪಾಲಿಗೆ ಬಹುಜನರೆಂದರೆ ಹಿಂದೂಗಳು, ನಮಗೆ ಬಹುಜನರೆಂದರೆ ಈ ದೇಶದ ದುಡಿಯುವ ಜನ. ಮಾಧ್ಯಮಗಳಲ್ಲಿ ಕೂಡ ಇದೇ ರೀತಿ ಬಿಂಬಿಸಲಾಗುತ್ತಿದೆ" ಎಂದು ಹೇಳಿದರು.

"ಮಧ್ಯಮ ವರ್ಗಕ್ಕೆ ಸ್ವರ್ಗವನ್ನೇ ತಂದಿದ್ದೇವೆ ಎಂದು ಮಾಧ್ಯಮಗಳಲ್ಲಿ ಕೇಂದ್ರ ಬಜೆಟ್ ಬಗ್ಗೆ ಚರ್ಚೆಯಾಗುತ್ತಿದೆ.

ಎಲ್ಲ ವೇದಿಕೆಗಳಲ್ಲಿ ಈ ಬಗ್ಗೆ ವ್ಯವಸ್ಥಿತವಾಗಿ ಚರ್ಚೆ ಮಾಡುತ್ತಿದ್ದಾರೆ. ಆದರೆ, ಕೇಂದ್ರದ ಬಜೆಟ್‌ನಲ್ಲಿ, ನಮ್ಮ ದೇಶದ ದುಡಿಯುವ ಜನ ಹಾಗೂ ಸ್ವ-ಉದ್ಯೋಗಿಗಳ ವೇತನ ಮಟ್ಟ ಕೋವಿಡ್ ಪೂರ್ವದಲ್ಲಿ ಇದ್ದಷ್ಟೇ 2025 ರಲ್ಲೂ ಇದೆ ಎಂದು ಹೇಳುತ್ತದೆ.

# ನಾಳೆ ವಿಶ್ವ ಗ್ರಾಹಕರ ದಿನಾಚರಣೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ, ಗದಗ ಇವರ ಸಂಯುಕ್ತಾಶ್ರಯದಲ್ಲಿ ಮಾರ್ಚ್ 15 ರಂದು ಮಧ್ಯಾಹ್ನ 12 ಗಂಟೆಗೆ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ಮಹಾವಿದ್ಯಾಲಯದ ಎ.ಸಿ. ಆಡಿಟೋರಿಯಂ ಹಾಲ್‌ನಲ್ಲಿ ವಿಶ್ವ ಗ್ರಾಹಕರ ದಿನಾಚರಣೆ -2025 ನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮವನ್ನು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಉದ್ಘಾಟಿಸಲಿದ್ದಾರೆ. ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎ.ಜಿ. ಮಾಲ್ದಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡ್ರ , ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ , ಜಿಲ್ಲಾಧಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ.ಪಲ್ಲೇದ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಶ್ರೀಮತಿ ಯಶೋಧಾ ಪಾಟೀಲ ಆಗಮಿಸುವರು. ವಿಶೇಷ ಆಹ್ವಾನಿತರಾಗಿ ಗದಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಯ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ ಹಾಗೂ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿ ಪಾಟೀಲ ಆಗಮಿಸುವರು. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಜಿಲ್ಲಾ ಅಂಕಿತ ಅಧಿಕಾರಿ ಡಾ. ವಿಜಯ ಕಂಠಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕ ವಿನೋದಕುಮಾರ್ ಹೆಗ್ಗಳಗಿ , ಕಾನೂನು ಮಾಪನ ಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕರಾದ ಎಸ್.ಎಂ.ಬುರಾನಪೂರ ಸ್ವಾಗತ ಕೋರಿದ್ದಾರೆ.

## ನಿಧನ

**ಹುಸೇನಸಾಬ ಮೋತೆಖಾನ್**



ರೋಣ: ತಾಲೂಕಿನ ಮಾರನಬಸರಿ ಗ್ರಾಮದ ಹುಸೇನ್‌ಸಾಬ ಕಾಶೀಮಸಾಬ್ ಮೋತೆಖಾನ್ (58)ಎಂಬುವರು ಬುಧವಾರ ಬೆಳಿಗ್ಗೆ ಮಾರನಬಸರಿ ಗ್ರಾಮದ ಸ್ವ ಗ್ರಹದಲ್ಲಿ ನಿಧನರಾದರು. ಮೃತರು ಪತ್ನಿ ಹಾಗೂ ಮೂವರು ಪುತ್ರರು ಸೇರಿದಂತೆ ಅಪಾರ ಬಳಗವನ್ನು ಅಗಲಿದ್ದಾರೆ.

### ಕಪ್ಪತ್ತಗಿರಿ ಫೌಂಡೇಶನ್ ವತಿಯಿಂದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ

# ಸಾಧಕಿಯರಿಗೆ ಪ್ರಶಸ್ತಿ ಪ್ರದಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕಳಸಾಪುರದ ಕಪ್ಪತ್ತಗಿರಿ ಫೌಂಡೇಶನ್ ವತಿಯಿಂದ ಆಯೋಜಿಸಿದ್ದ ಮಹಿಳಾ ಸಮ್ಮೇಳನದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹಿಳಾ ಸಾಧಕಿಯರಿಗೆ ಪ್ರಶಸ್ತಿ ಪ್ರದಾನ, ಸಂಪಾದಿತ ಕೃತಿ ಬಿಡುಗಡೆ, ಗೌರವ ಸಮ್ಮಾನ, ವಿದ್ಯಾರ್ಥಿಗಳಿಗೆ ಬಹುಮಾನ ವಿತರಣೆ ಕಾರ್ಯಕ್ರಮ ಜರುಗಿತು.

ಸಮ್ಮೇಳನದ ಸರ್ವಾಧ್ಯಕ್ಷರಾದ ರತ್ನಾ ಬದಿ ಅವರನ್ನು ಗದಗ ನಗರಕ್ಕೆ ಬರಮಾಡಿಕೊಳ್ಳಲಾಯಿತು. ಮೆರವಣಿಗೆಗೆ ವಿದ್ಯಾವತಿ ಗಡಗಿ ಹಾಗೂ ಎಸ್.ಬಿ. ಹೂಗಾರ, ಮಲ್ಲಿಕಾರ್ಜುನ ಖಂಡಮ್ಮನವರ, ಎ.ಎಸ್. ಮಕಾನದಾರ ಚಾಲನೆ ನೀಡಿದರು.

ಓಂಕಾರಗಿರಿ ಹಿರೇಮಠದ ಪೂಜ್ಯ ಫಕ್ಕೀರೇಶ್ವರ ಶಿವಾಚಾರ್ಯರು ದಿವ್ಯ ಸಾನ್ನಿಧ್ಯ ವಹಿಸಿದ್ದರು. ಗಣ್ಯರಾದ ಶರದ್‌ರಾವ ಹುಯಿಲಗೋಳ ಘನ ಉಪಸ್ಥಿತಿ ವಹಿಸಿದ್ದರು. ಅಧ್ಯಕ್ಷತೆಯನ್ನು ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷರಾದ ಚಂದ್ರಕಲಾ ಎಂ.ಇಟಗಿಮಠ ವಹಿಸಿದ್ದರು. ಡಾ. ಭೀಮಸಿಂಗ್ ರಾಠೋಡ ಕಾರ್ಯಕ್ರಮ ಉದ್ಘಾಟಿಸಿದರು.

ಕಸಾಪ ಜಿಲ್ಲಾಧ್ಯಕ್ಷ ವಿವೇಕಾನಂದಗೌಡ ಪಾಟೀಲ ಭೂಮಿ ತೂಕದಾಕೆ ಪುಸ್ತಕ ಬಿಡುಗಡೆ ಮಾಡಿದರು.



ಸುರೇಶ ಕುಂಬಾರ ಪುಸ್ತಕ ಮಳಿಗೆ ಉದ್ಘಾಟಿಸಿದರು. ಮುಖ್ಯ ಅತಿಥಿಗಳಾಗಿ ಎಸ್.ಪಿ. ಹಿರೇಮ್ಮಠ, ವಿ.ಎಂ. ಹಿರೇಮಠ ಪಾಲ್ಗೊಂಡಿದ್ದರು. ವಿಚಾರ ಸಂಕಿರಣದಲ್ಲಿ ಶಿವಲೀಲಾ ಧನ್ನಾ ಆಶಯ ನುಡಿಗಳನ್ನಾಡಿದರು.

ಸುಜ್ಞಾನಿ ಪಾಟೀಲ ಸ್ವಾಗತಿಸಿದರು. ಡಾ. ನಿಂಗಪ್ಪ ಮಾದಣ್ಣವರು ಜನಪದ ಸಾಹಿತ್ಯದಲ್ಲಿ ಮಹಿಳೆ ವಿಷಯದ ಬಗ್ಗೆ ಉಪನ್ಯಾಸ ನೀಡಿದರೆ, ಉಪನ್ಯಾಸಕಿ ರೇಖಾ ಒಡಕಣ್ಣವರ ಪ್ರಸ್ತುತ ಸಮಾಜದಲ್ಲಿ ಮಹಿಳೆಯರ ಪಾತ್ರದ ಕುರಿತು ಮಾತನಾಡಿದರು.

ಸುರೇಶ ಕುಂಬಾರ, ಎ.ಎಸ್. ಗುಬ್ಬಿ, ಮುನ್ನಾ ಕಲ್ಮನಿ, ಸತ್ಯಪ್ಪನವರ, ಸಂಗಮೇಶ ತಮ್ಮನಗೌಡ್ರ, ಚನ್ನಬಸಯ್ಯ ಹಿರೇವ್ಮಠ, ಮಲ್ಲಿಕಾರ್ಜುನ ಖಂಡಮ್ಮನವರ ಇವರನ್ನು ಸನ್ಮಾನಿಸಲಾಯಿತು. ಕವಿಗೋಷ್ಠಿಯ ಅಧ್ಯಕ್ಷತೆಯನ್ನು ಪಂಚಯ್ಯ ಹಿರೇಮಠ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ಗಣಪತಿ ಹೆಗಡೆ, ಪ್ರವೀಣ ಕನ್ಯಾಳ ಪಾಲ್ಗೊಂಡಿದ್ದರು. ಗೋಷ್ಠಿ ಎರಡರ ಸ್ವಾಗತವನ್ನು ನಾಗರತ್ನ ಹೊಸಮನಿ, ನಿರ್ವಹಣೆಯನ್ನು ಲಕ್ಷ್ಮೀ ಬರದೂರವ್ಮಠ, ಮಾಲಾ ಪಾಟೀಲ ನರಗುಂದ, ವಂದನಾರ್ಪಣೆಯನ್ನು ಮಮತಾ ದೊಡ್ಡಮನಿ ಮಾಡಿದರು. ಶಿವಾನಂದ ಮಾಯಪ್ಪನವರ ಸ್ವಾಗತಿಸಿದರು. ಪ್ರಾಸ್ತಾವಿಕವಾಗಿ ಮಹಾಂತೇಶ ಬೇರಗಣ್ಣವರು ಮಾತನಾಡಿದರು.

ಸಭಾ ಕಾರ್ಯಕ್ರಮದಲ್ಲಿ ಸರೋಜಾ ಹುಯಿಲಗೋಳ ಸ್ವಾಗತಿಸಿದರು. ಮಾಲಾ ಇಟಗಿಮಠ, ಸೌಮ್ಯ ಹಿರೇಮಠ, ಈಶ್ವರಿ ಮಳಿಮಠ ನಿರ್ವಹಿಸಿದರು. ಈಶ್ವರ ಕುರಿ, ಜ್ಯೋತಿ ಮ್ಯಾಗೇರಿ ನಿರೂಪಿಸಿದರು.

ಯಶೋಧಾ ಬಮ್ಮನಕಟ್ಟಿ, ಚನ್ನಮ್ಮ ಹೇಮಗಿರಿಮ್ಮಠ, ಜ್ಯೋತಿ ನಾಯಕ, ಡಾ. ಸುವರ್ಣ ನಿಡಗುಂದಿ, ವೀಣಾ ಹೇಮಂತಗೌಡ ಪಾಟೀಲ, ಲಕ್ಷ್ಮವ್ವ ಎಲ್ಲಪ್ಪ ಬಳ್ಳಾರಿ, ರೇಣುಕಾ ಜಗಂಡಭಾವಿ, ನೀಲಮ್ಮ ಕಾಳಪ್ಪ ಸೋಮಣ್ಣವರ, ಸುಮಂಗಲಾ ಸಂಕಣ್ಣವರ, ಶಾಂತಾ ಇನಾಮತಿ ಇವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

## ಮದ್ಯ, ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ನಾಳೆ ಉಪನ್ಯಾಸ, ಜನಜಾಗೃತಿ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ ಬೆಂಗಳೂರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಗದಗ, ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇವರ ಸಹಯೋಗದಲ್ಲಿ ಮಾರ್ಚ್ 15 ರಂದು ಬೆಳಿಗ್ಗೆ 10 ಗಂಟೆಗೆ ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದಲ್ಲಿ ಮದ್ಯ ಮತ್ತು ಮಾದಕ ವಸ್ತುಗಳ ದುಷ್ಪರಿಣಾಮ ಕುರಿತು ಉಪನ್ಯಾಸ ಹಾಗೂ ಜನಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಪತಿ ಡಾ.ಸುರೇಶ ವಿ ನಾಡಗೌಡರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಅತಿಥಿಗಳಾಗಿ ಜಿ.ಪಂ.ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಡಾ. ರವಿ ಗುಂಜೀಕರ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ ಆಗಮಿಸುವರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಜಿಲ್ಲಾ ಮಾನಸಿಕ ಆರೋಗ್ಯ ಕಾರ್ಯಕ್ರಮದ ಮನೊರೋಗ ತಜ್ಞ ಡಾ.ರಾಘವೇಂದ್ರ ಪಾಟೀಲ ಉಪನ್ಯಾಸ ನೀಡುವರು. ರೋಣದ ಜೀವನ ಬೆಳಕು ಕಲಾ ತಂಡದವರಿಂದ ಜಾಗೃತಿ ಗೀತೆಗಳು ಜರುಗಲಿವೆ.

ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿಯ ಕಾರ್ಯದರ್ಶಿ ಮಹೇಶ , ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಬಿ ಮಡ್ಲೂರ ಸ್ವಾಗತ ಕೋರಿದ್ದಾರೆ.

## ನಿಧನ

### ಯಲ್ಲಮ್ಮ ರಡ್ಡೇರ



ಡಂಬಳ: ಸಮೀಪದ ಪೇಠಾ ಆಲೂರ ಗ್ರಾಮದ ರಡ್ಡಿ ಸಮಾಜದ ಹಿರಿಯರಾದ ಯಲ್ಲಮ್ಮ ಪಕ್ಕನಗೌಡ ರಡ್ಡೇರ (78) ಗುರುವಾರ ಸಂಜೆ ನಿಧನರಾದರು.

ಮೃತರಿಗೆ ಪತಿ, ಪುತ್ರ, ಇಬ್ಬರು ಪುತ್ರಿಯರು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು-ಬಳಗವಿದೆ. ಮಾ.14ರ ಶುಕ್ರವಾರ ಮಧ್ಯಾಹ್ನ 2ಗಂಟೆಗೆ ಸ್ವ ಗ್ರಾಮದಲ್ಲಿ ಅಂತ್ಯಕ್ರಿಯೆ ಜರುಗಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

### ರಾಜ್ಯದಲ್ಲಿ ಕುರಿಗಾರರ ಮೇಲಿನ ಹಲ್ಲೆ, ಹತ್ಯೆ, ಬಹಿಷ್ಕಾರ ಖಂಡಿಸಿ ಗದುಗಿನಲ್ಲಿ ಪ್ರತಿಭಟನೆ, ಮನವಿ ಸಲ್ಲಿಕೆ

# ಸರಕಾರ ಕುರಿಗಾರರ ಹಿತರಕ್ಷಣೆಗೆ ಮುಂದಾಗಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಬಾಗಲಕೋಟೆ ಜಿಲ್ಲೆಯ ಬಾದಾಮಿ ತಾಲೂಕಿನ ಉಗಳವಾಟ ಗ್ರಾಮದಲ್ಲಿ ಕುರಿಗಾಹಿಯ ಕತ್ತು ಕತ್ತರಿಸಿ ಹತ್ಯೆ ಮಾಡಿರುವದನ್ನು ಖಂಡಿಸಿ, ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲೂಕಿನ ಹಿರೇಮ್ಯಾಗೇರಿ ಗ್ರಾಮದ ಕುರುಬ ಸಮಾಜದ ಮಹಿಳಾ ಪಿ.ಡಿ.ಓ ಮೇಲೆ ಹಲ್ಲೆ ಮತ್ತು ಕಲಬುರಗಿ ಜಿಲ್ಲೆಯ ಅಳಂದ ತಾಲೂಕಿನ ಖಾನಾಪುರ ಗ್ರಾಮದಲ್ಲಿ ಕುರುಬರಿಗೆ ಬಹಿಷ್ಕಾರ ಹಾಕಿರುವದನ್ನು ಖಂಡಿಸಿ ಗದಗ ಜಿಲ್ಲೆಯ ಕುರುಬ ಸಮುದಾಯದ ವಿವಿಧ ಸಂಘಟನೆಗಳು ಹಾಗೂ ಜಿಲ್ಲಾ ಕುರಿಗಾರರ ಸಹಕಾರಿ ಸಂಘಗಳ ಒಕ್ಕೂಟದ ವತಿಯಿಂದ ಗುರುವಾರ ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಲಾಯಿತು.

ನಗರದ ಟಿಪ್ಪು ವೃತ್ತದಿಂದ ಕುರುಬ ಸಮಾಜ ಬಾಂಧವರು ನೂರಾರು ಕುರಿಗಳೊಂದಿಗೆ ಜಿಲ್ಲಾಧಿಕಾರಿ ಕಚೇರಿವರೆಗೂ ತೆರಳಿ ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು. ಉಗಲವಾಟ ಗ್ರಾಮದಲ್ಲಿ ಕುರಿಗಾಹಿ ಯುವಕ ಶರಣಪ್ಪ ಜಮ್ಮನಕಟ್ಟಿಯ ಮೇಲೆ ದುಷ್ಕರ್ಮಿಗಳು ಅಮಾನುಷ ಕೃತ್ಯ ಮೆರೆದು ಕತ್ತು ಸೀಳಿ ಕೊಂದು ಹಾಕಿದ್ದಾರೆ. ಭಾರತ ದೇಶದ ಸಂಸ್ಕೃತಿಗೆ ಕುರುಬರ ಕೊಡುಗೆ ದೊಡ್ಡದಿದೆ. ಮುಗ್ಧ ಕುರುಬ ಸಮುದಾಯದ ಮೇಲೆ ನಿರಂತರ ದೌರ್ಜನ್ಯ ನಡೆಯುತ್ತಿದೆ. ಒಂದೇ ತಿಂಗಳಿನಲ್ಲಿ ಮೂರು ಪ್ರಕರಣಗಳು ನಡೆದಿವೆ.

ಬಾಗಲಕೋಟೆ ಜಿಲ್ಲೆ ಮಾತ್ರವಲ್ಲದೇ ರಾಜ್ಯಾದ್ಯಂತ ಕುರಿಗಾಹಿಗಳು ಸಾಕಷ್ಟು ಸಂಕಷ್ಟಗಳನ್ನು ಅನುಭವಿಸುತ್ತಿದ್ದಾರೆ. ಮಳೆ, ಗಾಳಿ, ಬಿಸಿಲೆನ್ನದೇ ಊರೂರು ಸುತ್ತುವ, ಪ್ರಕೃತಿಯ ಆರಾಧಕರಾಗಿರುವ ಕುರಿಗಾಹಿಗಳಿಗೆ ರಕ್ಷಣೆಯಿಲ್ಲದಂತಾಗಿದೆ. ಅರಣ್ಯ ಇಲಾಖೆಯವರ





ಮಾನಸಿಕ, ದೈಹಿಕ ಹಿಂಸೆಗಳು ಜೊತೆಗೆ ಕಳ್ಳಕಾಕರಿಂದ ಕುರಿಗಳನ್ನು ರಕ್ಷಿಸಿಕೊಳ್ಳಬೇಕಾದ ಅನಿವಾರ್ಯತೆಯಿದೆ.

ಸರ್ಕಾರ ಬಜೆಟ್‌ನಲ್ಲಿ ಕುರಿಗಾರರಿಗೆ ಸೌಲಭ್ಯಗಳ ಘೋಷಣೆಗಳನ್ನು ಮಾಡುತ್ತಿವೆಯಾದರೂ ಕುರಿಗಾರರಿಗೆ ಅನುಕೂಲಗಳು ಮರೀಚಿಕೆಯಾಗಿವೆ. ಸರ್ಕಾರ ಕಾಯಿದೆಗಳನ್ನು ಮಾಡಿವೆ. ಆದರೆ ಯಾವುದೂ ಸಹ ಕಾರ್ಯರೂಪಕ್ಕೆ ಬರುತ್ತಿಲ್ಲ. ಕುರಿಗಾಹಿಗಳು ದೇಶದ ಅವಿಭಾಜ್ಯ ಅಂಗವಾಗಿದ್ದು, ಅವರ ಜೀವನೋಪಾಯ ಮತ್ತು ಸುರಕ್ಷತೆಗೆ ರಾಜ್ಯ ಸರ್ಕಾರದ ತುರ್ತು ಗಮನ ನೀಡಬೇಕಿದೆ ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕುರುಬ ಸಮಾಜದ ಹಿರಿಯರಾದ ಫಕ್ಕೀರಪ್ಪ ಹೆಬಸೂರ, ರುದ್ರಣ್ಣ ಗುಳಗುಳಿ, ವಾಸಣ್ಣ ಕುರಡಗಿ, ರವಿ ದಂಡಿನ, ಹೇಮಂತ ಗಿಡ್ಡಹನುಮಣ್ಣವರ, ಮಂಜು ಜಡಿ, ಮುತ್ತು ಜಡಿ, ಬಸವರಾಜ ಕುರಿ, ಉಮೇಶ ಪೂಜಾರ, ರವಿ ಜೋಗಿನ, ಮಲ್ಲೇಶಪ್ಪ ಕೊಣ್ಣೂರ, ಮುತ್ತಪ್ಪ ಕುರಿ, ಕುಮಾರ ಮಾರನಬಸರಿ, ಬಸಪ್ಪ ಶಿರೂರ, ನಾರಾಯಣ ಜಡಿ, ದೇವಪ್ಪ ಮಲ್ಲಸಮುದ್ರ, ಬಸವರಾಜ ಜಡಿ, ಬರಮಲಿಂಗಪ್ಪ ಬಿಂಗಿ, ಸೋಮು ಮೇಟಿ, ಚನ್ನಪ್ಪ ಕೊಪ್ಪದ, ಮುದಿಯಪ್ಪ ಬಿಸಾವಿ, ಸಿದ್ದಲಿಂಗಪ್ಪ ಕಾಡಣವರ, ಮಂಜುನಾಥ ಹುಲ್ಲೂರು, ಎಸ್.ಎಸ್. ಹಳ್ಳಿ, ಮಲ್ಲಪ್ಪ ಓಲೇಕಾರ, ಗೋಳಪ್ಪ ಕೋತಿ, ರಮೇಶ ಮಳಲಿ, ಬಸಪ್ಪ ರೋಣದ, ಬಸವರಾಜ ಅಣ್ಣಿಗೇರಿ, ಚೆನ್ನಮ್ಮ ಹುಳಕಣ್ಣವರ, ರೇಖಾ ಜಡಿಯವರ, ಸುರೇಖಾ ಕುರಿ, ಬಾಳಮ್ಮ ಶಿವಾನಂದಮಠ, ಭಾಗ್ಯಶ್ರೀ ಬಾಬಣ್ಣ, ನಾಗಪ್ಪ ಗುಗ್ಗರಿ, ನೀಲಪ್ಪ ಗಡ್ಡಣ್ಣನವರ, ಉಮೇಶ ಜೋಳದ, ಹನುಮಂತಪ್ಪ ಮುಂಡರಗಿ, ಮಾರುತಿ ಜಡಿಯವರ, ಸುರೇಶ ಮಾಳಗಿಮನಿ, ರಾಜು ಪವರ, ಉಮೇಶ ಜೋಳದ, ಹನುಮಂತ ಗಿಡ್ಡಹನಮಣ್ಣವರ, ಸತೀಶ ಗಿಡ್ಡಹನಮಣ್ಣವರ, ಶೇಖರಪ್ಪ ಚನ್ನಳ್ಳಿ, ಫಕೀರೇಶ ಪೂಜಾರ, ಕುಶಾಲ ದೇವರಮನಿ, ಮಲ್ಲೇಶ ಬಡಿಗೇರ ಮುಂತಾದವರು ಉಪಸ್ಥಿತರಿದ್ದರು.

ಸರಕಾರ ಕುರಿಗಾರನ ಹತ್ಯೆ ಸೇರಿದಂತೆ ಎಲ್ಲಾ ಹಿಂಸಾತ್ಮಕ ಘಟನೆಗಳಿಗೆ ನಿಷ್ಪಕ್ಷಪಾತ ತನಿಖೆ ನಡೆಸಿ, ಆರೋಪಿಗಳಿಗೆ ಕಠಿಣ ಶಿಕ್ಷೆ ನೀಡಬೇಕು. ಪೊಲೀಸ್ ಪೆಟ್ರೋಲಿಂಗ್ ಹೆಚ್ಚಿಸಿ, ಕುರಿಗಾಹಿಗಳಿಗೆ ವಿಶೇಷ ರಕ್ಷಣೆ ಒದಗಿಸಬೇಕು. ಹತ್ಯೆಗೀಡಾದ ಕುರಿಗಾರರನ ಕುಟುಂಬಕ್ಕೆ ಆರ್ಥಿಕ ಪರಿಹಾರ ನೀಡಬೇಕು ಮತ್ತು ಕುರಿಗಾರರಿಗೆ ಬಂದೂಕು ತರಬೇತಿ ನೀಡಿ, ಲೈಸನ್ಸ್ ನೀಡುವ ಪ್ರಕ್ರಿಯೆ ಸರಳೀಕೃತಗೊಳಿಸಬೇಕು ಎಂದು ಪ್ರತಿಭಟನಾಕಾರರು ಒಕ್ಕೊರಲಿನಿಂದ ಆಗ್ರಹಿಸಿದರು.



# ವಿವಿಧೆಡೆ ಕೋಟ್ಪಾ ದಾಳಿ, ಎಚ್ಚರಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ್ ಮಾರ್ಗದರ್ಶನದಲ್ಲಿ ಸೋಮವಾರ ಜಿಲ್ಲಾ ತಂಬಾಕು ನಿಯಂತ್ರಣ ತನಿಖಾ ದಳ ಹಾಗೂ ತಾಲೂಕಾ ತಂಬಾಕು ನಿಯಂತ್ರಣ ತನಿಖಾ ದಳ ಗದಗ, ನಗರದ ರಾಜೀವ್ ಗಾಂಧಿ ಬಡಾವಣೆಯಲ್ಲಿನ ಶಾಲಾ ಕಾಲೇಜುಗಳ ಸುತ್ತ ತಂಬಾಕು ಉತ್ಪನ್ನಗಳ ಮಾರಾಟ ಮಾಡುತ್ತಿದ್ದ ಅಂಗಡಿಗಳ ವಿರುದ್ಧ ಕ್ರಮ ವಹಿಸಿ ಕೋಟ್ಪಾ ಕಾಯ್ದೆ ಉಲ್ಲಂಘನೆ ಮಾಡಿದವರಿಗೆ ರೂ.1400/- ದಂಡ ವಿಧಿಸಿ ಎಚ್ಚರಿಕೆ ನೀಡಲಾಯಿತು.



ತಂಬಾಕು ಸೇವನೆಯಿಂದಾಗುವ ದುಷ್ಪರಿಣಾಮ ಹಾಗೂ ತಂಬಾಕು ನಿಯಂತ್ರಣ ಕಾಯ್ದೆ ಕೋಟ್ಪಾ-2003ರ ಕುರಿತು ಸಾರ್ವಜನಿಕರಲ್ಲಿ ಹಾಗೂ ಅಂಗಡಿಕಾರರಲ್ಲಿ ಜಾಗೃತಿ ಮೂಡಿಸಲಾಯಿತು.

ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ನಿಷೇಧದ ಕುರಿತು ಪ್ರತಿಯೊಂದು ಸಾರ್ವಜನಿಕ ಸ್ಥಳಗಳಲ್ಲಿ ನಾಮಫಲಕ ಬಿತ್ತರಿಸುವದು ಆ ಸ್ಥಳದ ಮಾಲೀಕರ ಜಾವಾಬ್ದಾರಿಯಾಗಿರುತ್ತದೆ. ಚಹಾ ಅಂಗಡಿ, ಪಾನ್ ಶಾಪ್‌ಗಳ ಒಳಗಡೆ ಅನಧಿಕೃತ ಧೂಮಪಾನ ಅಡ್ಡಾಗಳನ್ನು ಮಾಡಿಕೊಂಡು, ಧೂಮಪಾನ ಮಾಡದ ಅಮಾಯಕರ ಆರೋಗ್ಯದ ಮೇಲೆ ಪರಿಣಾಮ ಬೀರಿ ಅವರು ತಂಬಾಕಿನಿಂದ ಉಂಟಾಗುವ ಖಾಯಿಲೆಗಳಿಗೆ ಬಲಿಯಾಗುತ್ತಿದ್ದಾರೆ. ಇಂತಹ ಅಡ್ಡಾಗಳನ್ನು ಬಂದ್ ಮಾಡುವಂತೆ ಎಚ್ಚರಿಕೆ ನೀಡಿ ಕ್ರಮಕೈಗೊಳ್ಳಲಾಯಿತು.

ಈ ದಾಳಿಗಳಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ಪೊಲೀಸ್ ಇಲಾಖೆಯ ಮಹಾಂತೇಶ ರಾಥೋಡ್, ಎ.ಆರ್. ಪಾಟೀಲ್, ಆರೋಗ್ಯ ಇಲಾಖೆಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೈ. ಎನ್. ಕಡೆಮನಿ, ಬಿ.ಸಿ. ಚಿತ್ತರಗಿ ಮುಂತಾದವರಿದ್ದರು.

## ಜಿಂದಾಶ್ಯಾವಲಿ ಉರುಸ್ ಉತ್ಸವ ಮಾ.16ಕ್ಕೆ

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಕದಾಂಪೂರ ರಸ್ತೆಯಲ್ಲಿರುವ ಹಜರತ್ ಜಿಂದಾಶ್ಯಾವಲಿ ಅವರ 57ನೇ ಉರುಸ್ ಉತ್ಸವ ಮಾರ್ಚ್ 16ರಂದು ಧಾರ್ಮಿಕ ವಿಧಿ ವಿಧಾನಗಳೊಂದಿಗೆ ಮುಸ್ಲಿಮ್ ಜಮಾತ್ (ಆಡಳಿತ) ಅಂಜುಮನ್ ಏ ಇಸ್ಲಾಮ್ ಕಮಿಟಿಯ ಆಶ್ರಯದಲ್ಲಿ ಜರುಗಲಿದೆ.

ಅಂದು ಗದ್ದುಗೆಯ ಮೇಲೆ ಪುಷ್ಪಗುಚ್ಛ ಏರಿಸುವ ಮೂಲಕ ಗದ್ದುಗೆಯ ಮುಂದೆ ಪ್ರಾರ್ಥನೆ ಕಾರ್ಯಕ್ರಮ ನೆರವೇರುವುದು. ರಾತ್ರಿ 9ಕ್ಕೆ ಜ್ಯೋತಿ ಬೆಳಗಿಸುವ ಕಾರ್ಯಕ್ರಮ, ಕಲಕತ್ತಾದ ಜಹಾಂಗೀರ ಅಲಮ್ ನೂರಿ ಅವರಿಂದ ಬಯಾನ ಕಾರ್ಯಕ್ರಮದಂಗವಾಗಿ ರಿವಾಯತ್ ಕವಾಲಿ, ಜಾನಪದ ಸಂಗೀತ ಕಾರ್ಯಕ್ರಮಗಳು ಜರುಗುವವು.



ನಂತರ ಗುರು ಕುಮಾರೇಶ್ವರ ನಾಟ್ಯ ಸಂಘ ನವಲಗುಂದ ಇವರಿಂದ ಸಂತ ಶಿಶುನಾಳ ಶರೀಫಸಾಬ ನಾಟಕ ಪ್ರದರ್ಶನಗೊಳ್ಳಲಿದೆ. ಇದಕ್ಕೂ ಪೂರ್ವ ಸಂದಲ್ (ಗಂಧ) ಉತ್ಸವವು ರಮಜಾನ ಶಾವಲಿಯವರ ಗದ್ದುಗೆಯಿಂದ ಆರಂಭವಾಗಿ ಗ್ರಾಮದ ಪ್ರಮುಖ ಬೀದಿಯಲ್ಲಿ ಮೆರವಣಿಗೆ ನಡೆದು ಜಂದಿಪೀರ ದರ್ಗಾದಲ್ಲಿ ಮುಕ್ತಾಯವಾಗಲಿದೆ. ಗುಡಗೇರಿಯ ತಾಜ್ ಮ್ಯೂಜಿಕಲ್ ಬ್ರಾಸ್‌ಬ್ಯಾಂಡ್ ಕಂಪನಿಯ ಕಲಾವಿದರು ಕನ್ನಡ ಮತ್ತು ಹಿಂದಿ ಚಿತ್ರಗೀತೆಗಳ ಮೂಲಕ ಮನ ರಂಜಿಸಲಿದ್ದಾರೆ. ಮಾ.17ರಂದು ಚಿರಶಾಂತಿ ಪ್ರಾರ್ಥನೆ, ಮಾ.27ರಂದು ಝೆಂಡಾ ಇಳಿಸುವುದು ಹಾಗೂ ಲೆಕ್ಕಪತ್ರ ಪರಿಶೀಲನಾ ಸಭೆ ನಡೆಯುವುದು ಎಂದು ಮುಸ್ಲಿಮ್ ಜಮಾತ್ (ಆಡಳಿತ) ಅಂಜುಮನ್ ಏ ಇಸ್ಲಾಮ್ ಕಮಿಟಿಯ ಪ್ರಕಟಣೆ ತಿಳಿಸಿದೆ.

# ಮಹಿಳೆ ಅಬಲೆಯಲ್ಲ, ಸಬಲೆ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಮಹಿಳೆ ಎಲ್ಲಾ ಕ್ಷೇತ್ರದಲ್ಲಿ ಮುನ್ನುಗುತ್ತಾ ತನ್ನದೇ ಛಾಪು ಮೂಡಿಸಿದ್ದಾಳೆ. ಮಹಿಳೆ ಇಂದು ಅಬಲೆಯಲ್ಲ, ಎಲ್ಲಾ ರಂಗದಲ್ಲೂ ಸಬಲೆಯಾಗಿದ್ದಾಳೆ ಎಂದು ನಿವೃತ್ತ ಪ್ರಾಚಾರ್ಯರಾದ ಮುಕ್ತಾ ಉಡುಪಿ ಹೇಳಿದರು.

ಅವರು ಪಟ್ಟಣದ ಸರಕಾರಿ ಮಾದರಿ ಕನ್ನಡ ಗಂಡುಮಕ್ಕಳ ಶಾಲೆ ನಂ.1ರಲ್ಲಿ ಉನ್ನತಿ ಮಹಿಳಾ ಸಮಾಜ ಸೇವಾ ಹಾಗೂ ವಿವಿಧೋದ್ದೇಶಗಳ ಟ್ರಸ್ಟ್ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಮಹಿಳೆಗೆ ಇಂದು ಎಲ್ಲಾ ರಂಗದಲ್ಲಿ ಪ್ರವೇಶಿಸುವ ಸ್ವಾತಂತ್ರ್ಯವಿದೆ. ಪುರುಷರಿಗೆ ಸರಿ ಸಮಾನವಾಗಿ ಕಾಯಕ ಮಾಡುವ ಶಕ್ತಿ ಹೊಂದಿದ್ದು, ಮಹಿಳೆಯರು ಪ್ರತೀ ಕುಟುಂಬದ ಆಧಾರಸ್ತಂಭವಾಗಿ ಕಾರ್ಯನಿರ್ವಹಣೆ ಮಾಡುತ್ತಿದ್ದಾಳೆ. ಭಾರತೀಯ ಸಂಸ್ಕೃತಿಯಲ್ಲಿ ಮಹಿಳೆಗೆ ಅಗ್ರ ಸ್ಥಾನವಿದೆ, ಮಹಿಳೆ ಒಂದು ಕುಟುಂಬದ ತಾಯಿಯಾಗಿ, ಮಗಳಾಗಿ, ಸೊಸೆಯಾಗಿ, ಪತ್ನಿಯಾಗಿ ಕಾರ್ಯನಿರ್ವಹಣೆ ಮಾಡುವವಳು ಎಂದರು.



ಅಧ್ಯಕ್ಷತೆ ಪ್ರೇಮಾ ಬಡ್ನಿ, ಸುನಂದಾ ನವಲೆ, ಹರ್ಷಾಲತಾ ದೇಶಪಾಂಡೆ, ಸುಮನ್ ಬಡ್ನಿ, ಗಂಗಮ್ಮಾ ಶಿರಮಾಪೂರ, ರೇಣುಕಾ ಜಾಧವ, ಮಾಹಾದೇವಿ ನೀಲಗುಂದ, ವಿಜಯಲಕ್ಷ್ಮಿ ನಿಂಗೋಜಿ, ಶಿಕ್ಷಕಿ ಶೋಭಾ ಪಾಟೀಲ್, ರಾಜೇಶ್ವರಿ ಬಡ್ನಿ ಹಾಗೂ ಉನ್ನತಿ ಮಹಿಳಾ ಸಂಘದ ಸರ್ವ ಸದಸ್ಯರು ಇದ್ದರು.

# ನಾವೆಲ್ಲರೂ ಧರ್ಮದ ಹಾದಿಯಲ್ಲಿ ನಡೆಯಬೇಕು

■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಶ್ರೀ ಜಗದ್ಗುರು ರೇಣುಕಾಚಾರ್ಯರಂತೆಯೇ ನಾವೆಲ್ಲರೂ ಧರ್ಮದ ಹಾದಿಯಲ್ಲಿ ನಡೆಯಬೇಕು ಎಂದು ಹುಬ್ಬಳ್ಳಿ ಗ್ರಾಮೀಣ ತಹಸೀಲ್ದಾರರಾದ ಜೆ.ಬಿ. ಮಜ್ಜಗಿ ಹೇಳಿದರು.

ಬುಧವಾರ ತಾಲೂಕು ಆಡಳಿತಸೌಧದ ತಹಸೀಲ್ದಾರ ಕಾರ್ಯಾಲಯದ ಸಭಾಭವನದಲ್ಲಿ ತಾಲೂಕು ಆಡಳಿತದಿಂದ ಹಮ್ಮಿಕೊಂಡಿದ್ದ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಾವೆಲ್ಲರೂ ಧರ್ಮದಿಂದ ಬದುಕಬೇಕು. ಜಯಂತಿ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಾಗವಹಿಸಬೇಕು ಎಂದರು. ತಿರುಮಲಕೊಪ್ಪದ ರೇಣುಕ ಧರ್ಮ ನಿವಾಸದ ಗುರುಗಳಾದ



ದಾನಯ್ಯ ದೇವರು ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರ ತತ್ವಗಳು ಮತ್ತು ಆದರ್ಶಗಳನ್ನು ಜನರಲ್ಲಿ ರೂಢಿಸಬೇಕು. ಧರ್ಮದ ಬಗ್ಗೆ ನಾವು ಮೊದಲು ಅರಿವು ಮೂಡಿಸಿಕೊಳ್ಳಬೇಕಾಗಿದೆ. ಶ್ರೀ ಜಗದ್ಗುರು ರೇಣುಕಾಚಾರ್ಯರು ಕೊಡುಗೆ ಧರ್ಮಕ್ಕೆ ಅಷ್ಟೇ ಅಲ್ಲದೆ, ಶೈಕ್ಷಣಿಕ ಕ್ಷೇತ್ರ, ಸಾಹಿತ್ಯ, ಸಾಂಸ್ಕೃತಿಕ ಕ್ಷೇತ್ರದಲ್ಲಿಯೂ ಅವರು ಕೊಡುಗೆ ನೀಡಿದ್ದಾರೆ ಎಂದು ಹೇಳಿದರು.

ಕೆ.ಎಲ್.ಇ. ಸೊಸೈಟಿಯ ಸದಸ್ಯರಾದ ಶಂಕರಣ್ಣ ಮುನವಳ್ಳಿ ಮಾತನಾಡಿ, ಸಮಾಜಕ್ಕೆ ನಾವು ಅಮೂಲ್ಯ ಕೊಡುಗೆ ನೀಡಲು ಮುಂದಾಗಬೇಕು. ವಿವಿಧ ಜಯಂತಿ ಆಚರಣೆ ಕಾರ್ಯಕ್ರಮಗಳಲ್ಲಿ ನಾವೆಲ್ಲರೂ ಭಾಗವಹಿಸಬೇಕು. ಜಾತಿ, ಪಂಥ, ಧರ್ಮ ಬಿಟ್ಟು ಎಲ್ಲ ಸಮಾಜದವರು ಒಟ್ಟಾಗಿ ಸೇರಿ ಸಮಾಜವನ್ನು ಅಭಿವೃದ್ಧಿಪಡಿಸುವ ಕೆಲಸ ಮಾಡಬೇಕಾಗಿದೆ ಎಂದು ತಿಳಿಸಿದರು.

ಡಾ. ಎಚ್.ವಿ. ಬೆಳಗಲಿ ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಶ್ರೀ ಸಮಾಜದ ಸಾಧಕರನ್ನು ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಗ್ರೇಡ್-2 ತಹಸೀಲ್ದಾರ ಜೆ.ವಿ. ಪಾಟೀಲ್, ಸಮಾಜದ ಮುಖಂಡರಾದ ನಿರಂಜನ ಹಿರೇಮಠ, ವಿಶ್ವನಾಥ ಹಿರೇಗೌಡ್ರ, ಶಿವಾನಂದ ಗುಂಜಾಳ, ಬಸವರಾಜ ಚಿಕ್ಕಮಠ, ಪ್ರಕಾಶ ಬೆಂಡಿಗೇರಿ, ನಿಂಗನಗೌಡ್ರ, ಸುಮಿತ್ರಾ ಶಿವಾನಂದ ಗುಂಜಾಳ, ರಮೇಶ ಪಾಟೀಲ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಾರ್ವಜನಿಕರು ಇತರರು ಉಪಸ್ಥಿತರಿದ್ದರು. ಚನ್ನಯ್ಯ ಚೌಕಿಮಠ ನಿರೂಪಿಸಿದರು.

# ‘ಅಮ್ಮ ಫೌಂಡೇಶನ್’ ಕ್ಯಾಲೆಂಡರ್ ಬಿಡುಗಡೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಬೆಂಗಳೂರಿನ ಸರಕಾರಿ ನೌಕರ ಭವನದಲ್ಲಿ ಅಮ್ಮ ಫೌಂಡೇಶನ್ ವತಿಯಿಂದ ಕ್ಯಾಲೆಂಡರ್ ಹಾಗೂ ಡೈರಿ ಬಿಡುಗಡೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಬಿಡಿಎ ವಿಶೇಷ ಭೂಸ್ವಾಧೀನ ಅಧಿಕಾರಿ ಇವರು ಜಗದೀಶ್ ಗಂಗಣ್ಣನವರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಾಮಾಜಿಕ ಸೇವೆಯ ಉದ್ದೇಶವನ್ನಿಟ್ಟುಕೊಂಡು ಕಾರ್ಯಪ್ರವೃತ್ತರಾಗಿರುವುದು ಸಂತಸದ ವಿಚಾರ ಎಂದರು.





ಕ್ಯಾಲೆಂಡರ್ ಬಿಡುಗಡೆಗೊಳಿಸಿದ ಪ್ರೆಸ್ ಕ್ಲಬ್‌ನ ಪ್ರಧಾನ ಕಾರ್ಯದರ್ಶಿ ಶಿವಕುಮಾರ ಬೆಳ್ಳಿತಟ್ಟೆ ಮಾತನಾಡುತ್ತಾ, ಫೌಂಡೇಶನ್ ವತಿಯಿಂದ ಸಮಾಜಕ್ಕೆ ಅನುಕೂಲಕರವಾದ ಕಾರ್ಯಗಳನ್ನು ಮಾಡಿ ಎಂದರು.

ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ಬಸವರಾಜ್ ಬಳ್ಳಾರಿ, ಟಿ.ಎಂ. ಮಂಜುನಾಥ್ ಮಾತನಾಡಿದರು. ಅಮ್ಮ ಫೌಂಡೇಶನ್ ಅಧ್ಯಕ್ಷ ಹಾಗೂ ವಕೀಲರಾದ ಮೈಲಾರಪ್ಪ ಡಿ.ಎಚ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸುರೇಶ್ ಹಾಳಕೇರಿ ಸ್ವಾಗತಿಸಿದರು. ಪರಶುರಾಮ್ ತಳವಾರ್ ಕಾರ್ಯಕ್ರಮ ನಿರೂಪಿಸಿದರು. ವಿಶ್ವನಾಥ ದಲಾಲಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಶಾಂತ್ ನಾಗರಹಳ್ಳಿ, ಬಸವರಾಜ್ ಲಾಲಿ, ಮಂಜುನಾಥ ನಿಡಗುಂದಿ, ಮಲ್ಲಿಕಾರ್ಜುನ ಪೂಜಾರ, ಬಸವರಾಜ ಪೂಜಾರ, ಸೌಮ್ಯ ಆರ್.ಸಿ, ಶರೀಫ ಡಿ.ಎಚ್, ಮಾರುತಿ ಜಿ.ಹೆಚ್ ಮುಂತಾದವರಿದ್ದರು.

# ಅಭಿವೃದ್ಧಿ ಕಾಮಗಾರಿಗಳ ಸಂಪೂರ್ಣ ಅನುಷ್ಠಾನವಾಗಲಿ

▶▶ಮೊದಲನೇ ಪುಟದಿಂದ

ಅಧಿಕಾರ ವಿಕೇಂದ್ರೀಕರಣ ವ್ಯವಸ್ಥೆಯಲ್ಲಿ ಯೋಜನೆಗಳ ತಯಾರಿಕೆಯಲ್ಲಿ ಅಧಿಕಾರಿಗಳು ಕ್ರಿಯಾಶೀಲರಾಗಿ ಕೆಲಸ ಮಾಡಬೇಕು ಎಂದರು.

ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮಾತನಾಡಿ, ಜಿಲ್ಲೆಯಿಂದ ಆಯಾ ಇಲಾಖೆಯಲ್ಲಿರುವ ಅವಶ್ಯಕತೆಗಳನ್ನು, ನ್ಯೂನತೆಗಳನ್ನು ಪಟ್ಟಿಮಾಡಿ ಸರ್ಕಾರಕ್ಕೆ ಕಳುಹಿಸಿದರೆ ಇಲಾಖೆಯ ಕೇಂದ್ರ ಕಚೇರಿಯಲ್ಲಿಯೂ ಸಹ ಅನುದಾನದ ಕುರಿತು ಯೋಜನೆ ತಯಾರಿಸಲು ಸಹಾಯವಾಗುತ್ತದೆ.

ಜಿಲ್ಲಾ ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ಇಲಾಖೆಯ ಬೇಡಿಕೆಗಳನ್ನು ಅವಶ್ಯಕತೆಗಳನ್ನು ಜಿಲ್ಲಾಡಳಿತದ ಗಮನಕ್ಕೆ ತರಬೇಕೆಂದರು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಮಾಜಿ ಶಾಸಕ ಡಿ.ಆರ್. ಪಾಟೀಲ, ಗಣ್ಯರಾದ ಸಿದ್ದು ಪಾಟೀಲ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸವರಾಜ ಕೊಟ್ಟೂರ, ಜಂಟಿ ಕೃಷಿ ನಿರ್ದೇಶಕಿ ತಾರಾಮಣಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ ಸೇರಿದಂತೆ ಗಣ್ಯರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಮುಸ್ಲಿಂ ಮಹಾಸಭಾ ಜಿಲ್ಲಾ ಕಾರ್ಯದರ್ಶಿಗಳ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಅಖಿಲ ಕರ್ನಾಟಕ ಮುಸ್ಲಿಂ ಮಹಾಸಭಾದ ಗದಗ ಜಿಲ್ಲಾ ಕಾರ್ಯದರ್ಶಿಗಳನ್ನಾಗಿ ಇಂಜಿನಿಯರಿಂಗ್ ಪದವೀಧರರಾದ ರಹೀಂಸಾಬ್ ಎಸ್.ದೊಡ್ಡಮನಿ ಇವರನ್ನು ರಾಜ್ಯಾಧ್ಯಕ್ಷರಾದ ಮಹ್ಮದಶಫಿವುದ್ದೀನ ಎಸ್.ನಾಗರಕಟ್ಟಿಯವರು ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ. ಶ್ರೀಯುತರು ಗದಗ ಜಿಲ್ಲೆಯಲ್ಲಿರುವ ಮುಸ್ಲಿಂ ಸಮುದಾಯದವರನ್ನು ಸಂಘಟಿಸಿ ಅವರನ್ನು ಆರ್ಥಿಕವಾಗಿ, ಸಾಮಾಜಿಕವಾಗಿ, ಶೈಕ್ಷಣಿಕವಾಗಿ ಮತ್ತು ರಾಜಕೀಯವಾಗಿ ಸಮಾಜದ ಮುಖ್ಯವಾಹಿನಿಗೆ ತರುವಲ್ಲಿ ಶ್ರಮ ವಹಿಸಬೇಕೆಂದು ಆದೇಶಿಸಿದ್ದಾರೆ. ಮುಂಬರುವ ದಿನಗಳಲ್ಲಿ ಮುಸ್ಲಿಂ ಸಮುದಾಯದವರ ಭವಿಷ್ಯವು ಉಜ್ವಲವಾಗುವಲ್ಲಿ ಮತ್ತು ದೇಶದ ಪ್ರಗತಿಯಲ್ಲಿ ಪ್ರಮುಖ ಪಾತ್ರ ವಹಿಸುವಂತೆ ಮಾಡಲು ಕಾರ್ಯಪ್ರವೃತ್ತರಾಗಬೇಕೆಂದು ಆಶಿಸಿದ್ದಾರೆ.

## ಹೋಳಿ ದೇಣಿಗೆ ಸಂಗ್ರಹ: 'ಜೈ ಶ್ರೀ ರಾಮ್' ಕೂಗುವಂತೆ ಒತ್ತಾಯಿಸಿ ಮುಸ್ಲಿಂ ಸಹೋದರರ ಮೇಲೆ ಮಾರಣಾಂತಿಕ ಹಲ್ಲೆ

■ವಿಜಯಸಾಕ್ಷಿ ಸುದ್ದಿ, ಉತ್ತರಪ್ರದೇಶ

ಉತ್ತರಪ್ರದೇಶದ ವಾರಣಾಸಿ ಜಿಲ್ಲೆಯಲ್ಲಿ ಹೋಳಿ ಹಬ್ಬಕ್ಕಾಗಿ ದೇಣಿಗೆ ಸಂಗ್ರಹಿಸುತ್ತಿದ್ದ ಸುಮಾರು ಒಂದು ಡಜನ್ ಜನರ ಗುಂಪೊಂದು ಇಬ್ಬರು ಮುಸ್ಲಿಂ ಸಹೋದರರ ಮೇಲೆ ಹರಿತವಾದ ಆಯುಧಗಳು ಮತ್ತು ದೊಣ್ಣೆಗಳಿಂದ ಹಲ್ಲೆ ನಡೆಸಿ 'ಜೈ ಶ್ರೀ ರಾಮ್' ಎಂಬ ಘೋಷಣೆಯನ್ನು ಕೂಗುವಂತೆ ಒತ್ತಾಯಿಸಿದೆ. ಬಲಿಯಾದವರನ್ನು ಜಿಲ್ಲೆಯ ದಿನದಯಾಳ್‌ಪುರ ಗ್ರಾಮದ ನಿಯಾಜ್ ಅಹ್ಮದ್ ಮತ್ತು ಖುರ್ಷಿದ್ ಅಹ್ಮದ್ ಎಂದು ಗುರುತಿಸಲಾಗಿದೆ.

### ಎಸ್‌ಎಸ್‌ಎಲ್‌ಸಿ ಪರೀಕ್ಷಾ ಸಿದ್ಧತೆಯ ಪೂರ್ವಭಾವಿ ಸಭೆಯಲ್ಲಿ ತಹಸೀಲ್ದಾರ ವಾಸುದೇವ ಎಂ.ಸ್ವಾಮಿ

# ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ನಡೆಯುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಯಾವುದೇ ಲೋಪಗಳಾಗದಂತೆ ಪರೀಕ್ಷೆಯು ಸುಗಮ, ಸುರಕ್ಷಿತ, ವ್ಯವಸ್ಥಿತ, ನಕಲುಮುಕ್ತವಾಗಿ ಜರುಗುವಂತೆ ಎಲ್ಲ ರೀತಿಯ ಪೂರ್ವ ಸಿದ್ಧತೆ, ಮುಂಜಾಗೃತಾ ಕ್ರಮಗಳನ್ನು ಪರೀಕ್ಷಾ ಉಸ್ತುವಾರಿಗಳು ತೆಗೆದುಕೊಳ್ಳಬೇಕು ಮತ್ತು ಎಲ್ಲ ಇಲಾಖೆಯ ಅಧಿಕಾರಿಗಳು ಕೈಜೋಡಿಸಬೇಕು ಎಂದು ತಹಸೀಲ್ದಾರ ವಾಸುದೇವ ಎಂ.ಸ್ವಾಮಿ ಹೇಳಿದರು.

ಅವರು ಪಟ್ಟಣದ ತಹಸೀಲ್ದಾರ ಕಚೇರಿಯಲ್ಲಿ ಗುರುವಾರ ನಡೆದ ಎಸ್‌ಎಸ್‌ಎಲ್‌ಸಿ ಪರೀಕ್ಷಾ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ತಾಲೂಕಿನಲ್ಲಿ ಯಾವುದೇ ಅಡೆತಡೆ ಇಲ್ಲದೆ ಸುಸೂತ್ರವಾಗಿ ಪರೀಕ್ಷೆ ನಡೆಸುವ ಉದ್ದೇಶದಿಂದ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಗಿದ್ದು, ಎಸ್‌ಎಸ್‌ಎಲ್‌ಸಿ ಪರೀಕ್ಷೆ ಬರೆಯುವ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ಸಮಸ್ಯೆಯಾಗದಂತೆ ಎಲ್ಲ ಇಲಾಖೆಯ ಅಧಿಕಾರಿಗಳು ಶಿಕ್ಷಣ ಇಲಾಖೆಯೊಂದಿಗೆ ಕೈಜೋಡಿಸಿ ಕೆಲಸ ಮಾಡುವುದು ಅಗತ್ಯವಾಗಿದೆ. ವಿದ್ಯಾರ್ಥಿಗಳು ಪರೀಕ್ಷೆ ಬರೆಯುವ ಕೇಂದ್ರದ ಹತ್ತಿರ



ಬಸ್ ನಿಲುಗಡೆ ಮಾಡುವ ಮೂಲಕ ಹೆಚ್ಚಿನ ಅನುಕೂಲ ಮಾಡಿಕೊಡುವುದು ಸೇರಿ ಶೌಚಾಲಯ, ಸ್ವಚ್ಛತೆ, ವಿದ್ಯುತ್ ವ್ಯವಸ್ಥೆ ಇತ್ಯಾದಿ ಅಗತ್ಯ ಸೌಲಭ್ಯ ಕಲ್ಪಿಸುವ ನಿಟ್ಟಿನಲ್ಲಿ ಸಂಬಂಧಪಟ್ಟ ಆರೋಗ್ಯ, ಸಾರಿಗೆ, ಹೆಸ್ಕಾಂ, ಗ್ರಾಪಂ ಎಲ್ಲ ಇಲಾಖೆಯ ಅಧಿಕಾರಿಗಳು ಹೆಚ್ಚಿನ ಕಾಳಜಿ ವಹಿಸಬೇಕು ಎಂದರು. ತಾ.ಪಂ ಇಓ ಕೃಷ್ಣಪ್ಪ ಧರ್ಮರ ಮಾತನಾಡಿ, ಆಯಾ ಇಲಾಖೆಯ ಅಧಿಕಾರಿಗಳು ತಮ್ಮ ತಮ್ಮ ಜವಾಬ್ದಾರಿ ಅರಿತು ಕೆಲಸ ಮಾಡಿ, ಗ್ರಾಮೀಣ ಭಾಗದಲ್ಲಿರುವ ಕೇಂದ್ರಗಳಿಗೆ ಬಸ್ ಸೌಲಭ್ಯ ದೊರಕಿಸಲು ಇಲಾಖೆಗೆ ತಿಳಿಸಲಾಗಿದೆ. ಬಸ್ ನಿಲ್ದಾಣದಿಂದ ಪರೀಕ್ಷಾ ಕೇಂದ್ರ ದೂರವಿದ್ದರೆ ಪಂಚಾಯಿತಿಯಿಂದ ವಾಹನ ಸೌಲಭ್ಯ ಒದಗಿಸಲು ಕ್ರಮ ಕೈಗೊಳ್ಳಲಾಗುವುದು. ಇದು ಮಕ್ಕಳ ಭವಿಷ್ಯದ ಪ್ರಶ್ನೆಯಾಗಿರುವದರಿಂದ ಯಾರೂ ನಿಷ್ಕಾಳಜಿ ವಹಿಸುವಂತಿಲ್ಲ. ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ವಿದ್ಯಾರ್ಥಿಗಳು ಪ್ರವೇಶ ಪತ್ರ ತೋರಿಸಿ ಉಚಿತವಾಗಿ ಪ್ರಯಾಣಿಸಲು ಅವಕಾಶ ಕಲ್ಪಿಸಲಾಗಿದೆ. ಮುಖ್ಯ ಅಧೀಕ್ಷಕರು ಜವಾಬ್ದಾರಿಯಿಂದ ಕಾರ್ಯ ನಿರ್ವಹಿಸಿ ಎಂದು ಸಲಹೆ ನೀಡಿದರು. ಸಭೆಯಲ್ಲಿ ಶಿಕ್ಷಣ ಸಂಯೋಜಕ ಉಮೇಶ ಹುಚ್ಚಯ್ಯನಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು. ಸಾರಿಗೆ ಇಲಾಖೆಯ ಘಟಕ ವ್ಯವಸ್ಥಾಪಕಿ ಸವಿತಾ ಆದಿ, ಕೆಪಿಟಿಸಿಎಲ್‌ನ ಆಂಜನೇಯಪ್ಪ ಬಿ, ಸಿಡಿಪಿಓ ಮೃತ್ಯುಂಜಯ ಜಿ, ಆರೋಗ್ಯ ಇಲಾಖೆಯ ಬಿ.ಎಸ್. ಹಿರೇಮಠ, ಪೊಲೀಸ್ ಇಲಾಖೆಯ ಎಎಸ್‌ಐ ವೈ.ಸಿ. ದೊಡ್ಡಮನಿ, ಸಿಆರ್‌ಸಿಗಳಾದ ಉಮೇಶ ನೇಕಾರ, ಸತೀಶ ಬೋಮಲೆ, ಜಯಶ್ರೀ ಕೋಲಕಾರ, ಎಸ್.ವಿ. ಪತ್ತಾರ, ಜೆ.ಡಿ. ಲಮಾಣಿ, ಕೆ.ವೈ. ಮೇಲಿನಮನಿ, ಸಿ.ಬಿ. ಮೊಗಲಿ, ಎಸ್.ವೈ. ಪಾಟೀಲ, ಜೆ.ಎಸ್. ಹಿರೇಮಠ, ಬಿ.ಎನ್. ಗಾಯಕವಾಡ, ಎಸ್.ಎಚ್. ಪೂಜಾರ, ಕೆ. ರವಿ ಸೇರಿದಂತೆ ಕೇಂದ್ರಗಳ ಮುಖ್ಯ ಅಧೀಕ್ಷಕರು ಹಾಜರಿದ್ದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್. ನಾಯ್ಕ್ ಮಾತನಾಡಿ ಲಕ್ಷ್ಮೇಶ್ವರ ತಾಲೂಕಿನಲ್ಲಿ ಒಟ್ಟು 6 ಪರೀಕ್ಷಾ ಕೇಂದ್ರಗಳಿದ್ದು, ಒಟ್ಟು 1,630 ಮಕ್ಕಳು ಪರೀಕ್ಷೆ ಬರೆಯಲಿದ್ದಾರೆ. ಯಾವುದೇ ಸಮಸ್ಯೆ ಆಗದಂತೆ ಪರೀಕ್ಷೆಗಳನ್ನು ನಡೆಸಲು ಎಲ್ಲ ತಯಾರಿ ಮಾಡಿಕೊಳ್ಳಲಾಗಿದೆ. ವಿದ್ಯಾರ್ಥಿಗಳು ಯಾವುದೇ ರೀತಿಯ ಭಯ ಇಲ್ಲದೆ ಪರೀಕ್ಷೆ ಬರೆಯಲು ಎಲ್ಲ ರೀತಿಯ ಕ್ರಮ ಕೈಗೊಳ್ಳಲಾಗಿದೆ. ಎಲ್ಲ ಪರೀಕ್ಷಾ ಕೇಂದ್ರಗಳಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಗಾಳಿ, ಬೆಳಕು, ವಿದ್ಯುತ್ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ಹೇಳಿದರು.

### ಉಚಿತ ಯೋಗ ಶಿಬಿರ, ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ಗುರು ನಮನ ಕಾರ್ಯಕ್ರಮ

# ಯೋಗ ನಮಗೆ ನಾವೇ ಕಂಡುಕೊಳ್ಳುವ ಚಿಕಿತ್ಸೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಆಧ್ಯಾತ್ಮದೊಂದಿಗೆ ಬಲವಾಗಿ ಬೇರೂರಿರುವ ಯೋಗ, ಪ್ರಾಣಾಯಾಮ, ಧ್ಯಾನದಿಂದ ಆತ್ಮವನ್ನು ಪರಮಾತ್ಮನಲ್ಲಿ ಲೀನವಾಗಿಸಿಕೊಂಡರೆ ವ್ಯಕ್ತಿ, ಸಮಾಜ, ದೇಶ ಸುಭಿಕ್ಷೆಯಿಂದ ಕೂಡಿರಲು ಸಾಧ್ಯ ಎಂದು ಕಡಕೋಳ ಕಪ್ಪತ್ತಗುಡ್ಡದ ಬಸವ ಯೋಗ ಸಮಿತಿಯ ಕರ್ನಾಟಕ ನಿಸರ್ಗ ಚಿಕಿತ್ಸಾ ಕೇಂದ್ರದ ಸಂಸ್ಥಾಪಕರಾದ ವೀರೇಶ ಗುರೂಜಿ ಹೇಳಿದರು.

ಅವರು ಬಿಸಿಎನ್ ಸ್ಪೆಕ್ಟ್ರಂ ಸ್ಕೂಲ್ ಮೈದಾನದಲ್ಲಿ ಉಚಿತ ಯೋಗ ಶಿಬಿರದಲ್ಲಿ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಿಜಯಪುರದ ಜ್ಞಾನ ಯೋಗಶ್ರಮದ ಪೂಜ್ಯ ಶ್ರೀ ಸಿದ್ದೇಶ್ವರ ಸ್ವಾಮೀಜಿಗಳಿಗೆ ಗುರು ನಮನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡುತ್ತಿದ್ದರು.



ಯೋಗ ನಮಗೆ ನಾವೇ ಕಂಡುಕೊಳ್ಳುವ ಚಿಕಿತ್ಸೆ ಮತ್ತು ಅರೋಗ್ಯದ ಕಣಜ. ಬಡವ, ಶ್ರೀಮಂತ ಭೇದಭಾವ ಮಾಡದೇ ಎಲ್ಲರೂ ಬದುಕಿನಲ್ಲಿ ಯೋಗ ಅಳವಡಿಸಿಕೊಂಡರೆ ಇಡೀ ಮನುಕುಲದ ವಿಕಾಸ ಸಾಧ್ಯ. ಮನುಷ್ಯನಲ್ಲಿನ ಅರಿಷಡ್ವರ್ಗಗಳನ್ನು ಹೋಗಲಾಡಿಸಿ ಸಾತ್ವಿಕ ಮತ್ತು ಪರಿಪೂರ್ಣ ಜೀವನಕ್ಕೆ ರಹದಾರಿಯನ್ನು ಯೋಗ ತೋರಿಸುತ್ತದೆ. ಸಿದ್ದೇಶ್ವರ ಶ್ರೀಗಳು ಯೋಗ ಮತ್ತು ಆಧ್ಯಾತ್ಮಿಕತೆಯ ತತ್ವಜ್ಞಾನಿಯಾಗಿದ್ದರು. ಅವರ ಬದುಕಿನ ರೀತಿ, ತೋರಿದ ಮಾರ್ಗದಲ್ಲಿ ನಡೆದರೆ ಬದುಕು ಸುಂದರವಾಗಿರುತ್ತದೆ ಎಂದರು.

ಹಿರಿಯರಾದ ವೀರಪ್ಪ ದೇಸಾಯಿಪಟ್ಟಿ ಮಾತನಾಡಿ, ಯೋಗ ಮನುಷ್ಯನ ಅವಿಭಾಜ್ಯ ಅಂಗವಾಗಬೇಕು. ದೈಹಿಕ ಮತ್ತು ಮಾನಸಿಕ ಆರೋಗ್ಯ, ನೆಮ್ಮದಿ, ರೋಗನಿರೋಧಕ ಶಕ್ತಿ ವೃದ್ಧಿಸಿ ಸ್ವಾಸ್ಥ್ಯ ಸಮಾಜಕ್ಕಾಗಿ ಯೋಗ ಶಿಬಿರಗಳ ಅಗತ್ಯತೆ ಸಾಕಷ್ಟಿದೆ ಎಂದರು.

ಜಯಲಕ್ಷ್ಮೀ ಯಲವಿಗಿ ಮಹಿಳಾ ದಿನಾಚರಣೆಯ ಕುರಿತು ಮಾತನಾಡಿದರು, ಶಿಕ್ಷಕಿ ಮೈತ್ರಾದೇವಿ ಹಿರೇಮಠ ಪೂಜ್ಯ ಶಿದ್ದೇಶ್ವರ ಸ್ವಾಮೀಜಿಗಳಿಗೆ ನುಡಿ ನಮನ ಸಲ್ಲಿಸಿದರು. ಬಸವ ಯೋಗ ಸಮಿತಿ ಜಿಲ್ಲಾಧ್ಯಕ್ಷ ನಾಗರಾಜ ಸೂರಣಗಿ, ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘ ತಾಲೂಕಾಧ್ಯಕ್ಷ ಸಿ.ಆರ್. ಲಕ್ಕುಂಡಿಮಠ, ಬಿಸಿಎನ್ ಶಾಲೆಯ ಪ್ರಾಚಾರ್ಯ ನಾಗರಾಜ ಯಂಡಿಗೇರಿ, ಯೋಗ ಸಾಧಕರಾದ ಇಂದ್ರವ್ವ ಬಾಲೆಹೊಸೂರ, ವೀಣಾ ಹತ್ತಿಕಾಳ, ಕಾಶಣ್ಣ ವಡಕಣ್ಣವರ, ಡಾ. ಪ್ರಸನ್ನ ಕುಲಕರ್ಣಿ ಮುಂತಾದವರಿದ್ದರು. ನಿರಂಜನ ವಾಲಿ, ನಂದಿನಿ ಮಾಳವಾಡ, ಸೌಮ್ಯ ನಾಯಕ ನಿರ್ವಹಿಸಿದರು.

## ವಿಠ್ಠಲ ಮಂದಿರದ ಜೀರ್ಣೋದ್ಧಾರ ಕಾರ್ಯಕ್ರಮ



■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಇಲ್ಲಿನ ವಿಠ್ಠಲ ಮಂದಿರದ ಜೀರ್ಣೋದ್ಧಾರದ ಅಂಗವಾಗಿ ಮಾ. 14ರಂದು ಮುಂಜಾನೆ 8 ಗಂಟೆಗೆ ರುದ್ರ ಸ್ವಾಹಾಕಾರ ಹೋಮ ಹಾಗೂ ಮೂತಿ ಸ್ಥಾಪನೆ ಕಾರ್ಯಕ್ರಮ ಜರುಗಲಿದೆ. ಮಧ್ಯಾಹ್ನ 12 ಗಂಟೆಗೆ ಪ್ರರ್ಣಾಹುತಿ, ನಂತರ ಮಹಾಮಂಗಳಾರತಿ, ನಂತರ ಮಹಾಪ್ರಸಾದ ನಡೆಯಲಿದೆ. ಮಾ. 16ರಂದು ತುಕಾರಾಮ್ ಬೀಜ, ಮಧ್ಯಾಹ್ನ 1.30ಕ್ಕೆ ಮಹಾಮಂಗಳಾರತಿ, ಮಾ. 20ರಂದು ಏಕನಾಥ ಶಷ್ಠಿ, ಮಧ್ಯಾಹ್ನ 1.30ಕ್ಕೆ ಮಂಗಳಾರತಿ, ಪ್ರಸಾದ ವಿತರಣೆ ಜರುಗುವದು. ಶ್ರೀ ವಿಠ್ಠಲ ಮಂದಿರದ ಸಂತ ಮಂಡಳಿ ಹಾಗೂ ಸದ್ಭಕ್ತರು ಏಳು ದಿನಗಳವರೆಗೆ ಜರುಗುವ ಸಪ್ತಾಹ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಮಂದಿರದ ಪ್ರಕಟಣೆ ತಿಳಿಸಿದೆ.

## ರಾಜ್ಯ ಬಜೆಟ್‌ನಲ್ಲಿ ಕೃಷಿಕರ ಸಮಸ್ಯೆಗಳಿಗೆ ಪರಿಹಾರವಿಲ್ಲ: ಶಾಸಕ ದರ್ಶನ್ ಪುಟ್ಟಣ್ಣಯ್ಯ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ರಾಜ್ಯ ಸರ್ಕಾರ ಮಂಡಿಸಿರುವ ಬಜೆಟ್‌ನಲ್ಲಿ ಕೃಷಿಕರ ಸಮಸ್ಯೆಗಳಿಗೆ ಪರಿಹಾರ ಇಲ್ಲ ಎಂದು ಮೇಲುಕೋಟೆ ಶಾಸಕ ದರ್ಶನ್ ಪುಟ್ಟಣ್ಣಯ್ಯ ಬೇಸರ ವ್ಯಕ್ತಪಡಿಸಿದರು.

ಬೆಂಗಳೂರಿನ ಗಾಂಧಿ ಭವನದಲ್ಲಿ ನಡೆಯುತ್ತಿರುವ 'ಜನ ಚಳವಳಿಗಳ ಬಜೆಟ್ ಅಧಿವೇಶನ'ದ ಎರಡನೇ ದಿನದ ಮೊದಲ ಗೋಷ್ಠಿಯಲ್ಲಿ ಮಾತನಾಡಿದ ಅವರು, "ರೈತರು, ಕಾರ್ಮಿಕರು, ವಿದ್ಯಾರ್ಥಿಗಳು, ಮಹಿಳೆಯರು ಈ ಬಾರಿಯ ಬಜೆಟ್ ಜನಪರವಾಗಿರಬೇಕು ಎಂದು ಹಲವು ಬೇಡಿಕೆಗಳನ್ನು ಇಟ್ಟಿದ್ದರು. ಆದರೆ, ಎಲ್ಲವೂ ಈಡೇರಿದೆ ಎಂದು ಅನಿಸುತ್ತಿಲ್ಲ" ಎಂದು ಹೇಳಿದರು.

"ಮುಖ್ಯಮಂತ್ರಿ ಸಿದ್ದರಾಮಯ್ಯ ಮಂಡಿಸಿರುವ ಬಜೆಟ್‌ನಲ್ಲಿ ರೈತರಿಗೆ ಇನ್ನಷ್ಟು ಹೆಚ್ಚು ಒತ್ತು ಕೊಡಬಹುದಿತ್ತು; ಮುಂದಿನ ದಿನಗಳಲ್ಲಿ ಬಜೆಟ್‌ನಲ್ಲಿ ರೈತರಿಗೆ, ಕೃಷಿಕರಿಗೆ ಮೀಸಲಿಡಬೇಕಾದಂತಹ ಹಣ ನಿಗಧಿ ಮಾಡಬೇಕು. ದೇಶದ ಮತ್ತು ರಾಜ್ಯದ ಜಿಡಿಪಿ ಅಭಿವೃದ್ಧಿಯಾಗಬೇಕೆಂದರೆ, ರೈತರ ಆದಾಯ ಹೆಚ್ಚಾಗಬೇಕು. ರೈತರ ಆದಾಯ ಹೆಚ್ಚಾಗದೇ ದೇಶದ ಅಭಿವೃದ್ಧಿ ಸಾಧ್ಯವಿಲ್ಲ. ರೈತರನ್ನು ನಗರಗಳಿಗೆ ಕರೆತಂದು ಕೆಲಸ ಕೊಡಲು ಸಾಧ್ಯವಿಲ್ಲ" ಎಂದು ಹೇಳಿದರು.

"ನೀರಾವರಿಗೆ ಅನುದಾನ ಹೆಚ್ಚು ಮಾಡಬೇಕಿತ್ತು; ಬೇಸಿಗೆ ಪ್ರಾರಂಭವಾಗುವುದಕ್ಕಿಂತ ಮೊದಲೇ ರೈತರಿಗೆ ವಿದ್ಯುತ್, ಟ್ರಾನ್ಸ್‌ಫಾರ್ಮ್‌ಗಳಲ್ಲಿ ಸಾಕಷ್ಟು ಸಮಸ್ಯೆಗಳು ಎದುರಾಗುತ್ತಿವೆ. ಇನ್ನು ಸಂಪೂರ್ಣವಾಗಿ ಬೇಸಿಗೆ ಪ್ರಾರಂಭವಾದರೆ ರೈತರ ಪರಿಸ್ಥಿತಿ ಏನು ಅನ್ನುವುದರ ಬಗ್ಗೆ ಸರ್ಕಾರ ಯೋಚನೆ ಮಾಡಬೇಕಿತ್ತು. ನೀರಾವರಿಗೆ ಬಜೆಟ್ ಜಾಸ್ತಿ ಮಾಡಬೇಕು. ಸರ್ಕಾರ ರೈತರಿಗೆ, ಕಾರ್ಮಿಕರಿಗೆ ಬೆಂಬಲ ಕೊಡುವ ರೀತಿಯಲ್ಲಿ ಬಜೆಟ್‌ಗಳನ್ನು ಮಂಡಿಸಬೇಕು" ಎಂದು ಹೇಳಿದರು.

ಕಾರ್ಮಿಕ ಮುಖಂಡರಾದ ಮೈತ್ರೇಯಿ ಕೃಷ್ಣನ್ ಮಾತನಾಡಿ, "ವರ್ಲ್ಡ್ ಇನ್ ಇಕ್ವಾಲಿಟಿ ಲ್ಯಾಬ್' ಪ್ರಕಾರ, ದೇಶಕ್ಕೆ ಸ್ವಾತಂತ್ರ್ಯ ಬರುವುದಕ್ಕೆ ಮೊದಲಿದ್ದ ಪರಿಸ್ಥಿತಿಯೇ ಈಗಲೂ ಇದೆ. ಕಳೆದ 15 ವರ್ಷಗಳಲ್ಲಿ ಅಸಮಾನತೆ ಇನ್ನೂ ಹೆಚ್ಚಾಗಿದೆ. ಇದೇ ಸಂದರ್ಭದಲ್ಲಿ ದೇಶದಲ್ಲಿ 271 ಜನ ಬಿಲೇನಿಯರ್‌ಗಳಿದ್ದಾರೆ. ದೇಶದ ಬಡತನ ಕೂಡ ಹೆಚ್ಚಾಗಿದೆ ಎಂದು ವರದಿ ಹೇಳುತ್ತದೆ" ಎಂದರು.

"ಶೇ. 10 ಜನರಲ್ಲಿ ಬಳಿ ಶೇ.77ರಷ್ಟು ಆಸ್ತಿ ಇದೆ. ಶೇ.73 ರಷ್ಟು ಜನರ ಬಳಿ ಉಳಿದ ಆಸ್ತಿ ಇದೆ.


## ಗ್ರಾಮ ಪಂಚಾಯತ ಕಾರ್ಯಾಲಯ, ಬೆಳಹೋಡ

ತಾಲೂಕ : ಗದಗ e-mail : belahod.gag.gdg@gmail.com ಜಿಲ್ಲಾ : ಗದಗ

ನಂ: ಗ್ರಾ.ಪಂ ಬೆಳಹೋಡ/ಟೆಂಡರ್/2024-25/ ದಿನಾಂಕ: 13-03-2025

### ಕೆಪಿಪಿ ಪೋರ್ಟಲ್ ಟೆಂಡರ್ ಪ್ರಕಟಣೆ (ದ್ವಿ-ಲಕೋಟಿ)

ಕರ್ನಾಟಕ ಸಾರ್ವಜನಿಕ ಪಾರದರ್ಶಕತೆ ಆಕ್ಟ್-2000 ನಿಯಮದಂತೆ ನಿಯಮಗಳನ್ವಯ ಅರ್ಹ ಗುತ್ತೇದಾರ/ಸರಬರಾಜುದಾರರಿಂದ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, ಮುಖಾಂತರ 01 ಕಾಮಗಾರಿಯ ಗುಣಮಟ್ಟದ ಸಾಮಗ್ರಿ ಪೂರೈಕೆಯ ಟೆಂಡರನ್ನು ಆಹ್ವಾನಿಸಲಾಗಿದೆ. ಲೆಕ್ಕ ಶೀರ್ಷಿಕೆ: 2024-25ನೇ ಸಾಲಿನ MGNREGA ಯೋಜನೆ ಅಡಿ ಟೆಂಡರ್‌ನ್ನು ಆಹ್ವಾನಿಸಲಾಗಿದೆ. ಗುತ್ತಿಗೆದಾರ/ಸರಬರಾಜುದಾರರು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್, https://kppp.karnataka.gov.in ಮುಖಾಂತರ ಭಾಗವಹಿಸಬಹುದು. ಕಾಮಗಾರಿಗಳ ವರ್ಕ ಇಂಡೆಂಟ್ ಸಂಖ್ಯೆಗಳು ಈ ಕೆಳಗಿನಂತೆ ಇರುತ್ತವೆ.

| ಕ್ರ.ಸಂ. | ಇಂಡೆಂಟ್ ನಂಬರ್ | ಟೆಂಡರಿಗಿಟ್ಟ ಮೊತ್ತ |
|---|---|---|
| 1 | RDPR/2024-25/IND8617 | ರೂ. 5,96,876.65 |

ಟೆಂಡರ್ ಅರ್ಜಿಯ ಬೆಲೆ ಹಾಗೂ ಇ.ಎಂ.ಡಿ ಮೊತ್ತದ ವಿವರ : ಅರ್ಜಿ ಬೆಲೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪೋರ್ಟಲ್ ನಂತೆ, ಇ.ಎಂ.ಡಿ. ಸಂಬಂದಪಟ್ಟಿ ವರ್ಕ್ಸ್ ಇಂಡೆಂಟ್‌ನಲ್ಲಿ ನೋಡಬಹುದಾಗಿದೆ.

ಇ-ಪ್ರೋಕ್ಯೂರಮೆಂಟ್ ಮುಖಾಂತರ ಅರ್ಜಿ ಹಾಗೂ ಶೆಡ್ಯೂಲ್-ಬಿ ಯನ್ನು ವೆಬಸೈಟನಲ್ಲಿ ಭರ್ತಿ ಮಾಡಿ ಸಲ್ಲಿಸುವ ದಿನಾಂಕ: 14-03-2025 ರಿಂದ 21-03-2025 ರಂದು 16.00 ಗಂಟೆಯುವರೆಗೆ. ತಾಂತ್ರಿಕ ಬಿಡ್ ಟೆಂಡರ್ ತೆರೆಯುವ ದಿನಾಂಕ: 22-03-2025 ರಂದು 16.30 ಗಂಟೆಗೆ ಆರ್ಥಿಕ ಬಿಡ್ ದಿ: 24-03-2025 ರಂದು 11.30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಮಾಹಿತಿಯನ್ನು ಈ ಕಚೇರಿಯ ಕೆಲಸದ ವೇಳೆಯಲ್ಲಿ ಪಡೆಯಬಹುದು.

ಸಹಿ ಆಗಿದೆ/-
**ಪಂಚಾಯತ ಅಭಿವೃದ್ಧಿ ಅದಿಕಾರಿಗಳು**
ಗ್ರಾಮ ಪಂಚಾಯತ ಬೆಳಹೋಡ
ತಾಲೂಕ/ಜಿಲ್ಲಾ : ಗದಗ.



## ಗ್ರಾಮ ಪಂಚಾಯತ ಕಾರ್ಯಾಲಯ, ಹುಯಿಲಗೋಳ

ತಾಲೂಕ :- ಗದಗ ಜಿಲ್ಲಾ:- ಗದಗ

ಸಂ.ಗ್ರಾ.ಪಂ.ಹಾ/ಮ.ಗಾಂ.ರಾ.ಗ್ರಾ.ಉ.ಖಾ.ಯೋಜನೆ/ದರಪಟ್ಟಿ/2024-25 ದಿನಾಂಕ: 13/03/2025

### : ದರಪಟ್ಟಿ ಪ್ರಕಟಣೆ :

ಅಧ್ಯಕ್ಷರು/ಅಭಿವೃದ್ಧಿ ಅಧಿಕಾರಿಗಳು ಗ್ರಾಮ ಪಂಚಾಯತ ಹುಯಿಲಗೋಳ ಇವರು 2024-25ನೇ ಸಾಲಿನ ಮಹಾತ್ಮಗಾಂಧೀ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆ ಅಡಿಯಲ್ಲಿ ಈ ಕೆಳಕಂಡ ಕಾಮಗಾರಿಗಳಿಗೆ ಅವಶ್ಯಕವಿರುವ ಐಟಂವಾರು ಸಾಮಗ್ರಿ ಮೊತ್ತಕ್ಕೆ ಸಾಮಗ್ರಿಗಳನ್ನು ಪೂರೈಸಲು ನೋಂದಾಯಿತ ಅರ್ಹ ವೆಂಡರ್/ಏಜೆನ್ಸಿಗಳಿಂದ ದರಪಟ್ಟಿಗಳನ್ನು ಆಹ್ವಾನಿಸಲಾಗಿದೆ. ಸದರಿ ಕಾಮಗಾರಿಗಳಿಗೆ ದರಪಟ್ಟಿ ಸಲ್ಲಿಸುವವರು ಗ್ರಾಮ ಪಂಚಾಯತಿಯಿಂದ ಖುದ್ದಾಗಿ ಖಾಲಿ ಟೆಂಡರ್ ಪಾರಂಗಳನ್ನು ಪಡೆದು ಸಲ್ಲಿಸತಕ್ಕದ್ದು.

| ಕ್ರ.ಸಂ. | ಕಾಮಗಾರಿ ಹೆಸರು | ಟೆಂಡರ್ ಮೊತ್ತ | ಖಾಲಿ ಟೆಂಡರ್ ಫಾರಂ ಬೆಲೆ (ರೂ.ಗಳಲ್ಲಿ) | ಷರಾ |
|---|---|---|---|---|
| 1 | ಹುಯಿಲಗೋಳ ಗ್ರಾಮದ ಸ್ಮಶಾನದಲ್ಲಿ ಚಿತಾಗಾರ ನಿರ್ಮಾಣ | 362040.61 | 500 | ಖಾಲಿ ಟೆಂಡರ್ ಗ್ರಾಮ ಪಂಚಾಯತಿಯಿಂದ ಪಡೆದು ಸಲ್ಲಿಸುವುದು. |
| 2 | ಹಿರೇಕೊಪ್ಪ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲಾ ಶೌಚಾಲಯ ನಿರ್ಮಾಣ | 129613 | 500 | |
| 3 | ಚಿಕ್ಕೊಪ್ಪ ಗ್ರಾಮದ HPS ಶಾಲಾ ಶೌಚಾಲಯ ನಿರ್ಮಾಣ | 129613 | 500 | |
| 4 | ಹುಯಿಲಗೋಳ ಗ್ರಾಮದ ಜುಬೇದಾಬೇಗಂ ಬಿಂಕದಟ್ಟಿಯವರ ಮನೆಯಿಂದ ದ್ಯಾಮಣ್ಣ ಕಮ್ಮಾರ ಕುಲುಮೇ ವರೆಗೆ ಗಟಾರ ನಿರ್ಮಾಣ. | 63483.52 | 500 | |
| 5 | ಹುಯಿಲಗೋಳ ಗ್ರಾಮದ ಅಮರೇಶ ಬಡಿಗೇರವರ ಮನೆಯಿಂದ ಬಳಗಾನೂರ ರಸ್ತೆಯವರಗೆ ಮೋರಂ ರಸ್ತೆ ನಿರ್ಮಾಣ | 87026.76 | 500 | |
| 6 | ಕಿರಟಗೇರಿ ಗ್ರಾಮದ ಮಳ್ಳಪ್ಪ ಹರಿಜನಯವರ ಹೊಲದಿಂದ ನೀಲಜ್ಜ ಮಳಲಿಯವರ ಹೊಲದವರಗೆ ಮೊರಂ ರಸ್ತೆ ನಿರ್ಮಾಣ. | 209903.36 | 500 | |
| 7 | ಕಿರಟಗೇರಿ ಗ್ರಾಮದ OHT ಯಿಂದ ನಾಗಪ್ಪ ವಡ್ಡಿನ ಮನೆಯವರಗೆ ಗಟಾರ ನಿರ್ಮಾಣ. | 197914.72 | 500 | |
| 8 | ಚಿಕ್ಕೊಪ್ಪ ಗ್ರಾಮದ ಶಿವಪ್ಪ ಬಳಿಯಲಿಯವರ ಮನೆಯಿಂದ ಮಂಜುನಾಥ ಮೂಲಿಮನಿಯವರ ಮನೆಯವರಗೆ ಸಿ ಸಿ ಗಟಾರ ನಿರ್ಮಾಣ. | 61835.85 | 500 | |
| 9 | ಚಿಕ್ಕೊಪ್ಪ ಗ್ರಾಮದ ಶ್ರೀ ಮಾರುತಿ ಗುಡಿಯಿಂದ ಸ್ಮಶಾನದವರೆಗೆ ಮೋರಂ ರಸ್ತೆ ನಿರ್ಮಾಣ | 61211.24 | 500 | |
| 10 | ಹುಯಿಲಗೋಳ ಗ್ರಾಮದ ಬಸವರಾಜ ಕರಿಮೇರಿ ಇವರ ಮನೆಯಿಂದ ಶಿವಪುತ್ರಪ್ಪ ಕೊಂಡಿ ಇವರ ಮನೆಯವರೆಗೆ ಸಿ.ಸಿ ಗಟಾರ ನಿರ್ಮಾಣ | 275859 | 500 | |
| 11 | ಹುಯಿಲಗೋಳ ಗ್ರಾಮದ ಕಲ್ಲಪ್ಪ ಕಲ್ಲೂರ ಇವರ ಮನೆಯಿಂದ ಶಂಕ್ರಪ್ಪ ತಳವಾರ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 255263 | 500 | |
| 12 | ಹುಯಿಲಗೋಳ ಗ್ರಾಮದ ಶಂಕ್ರಪ್ಪ ಭೀ ಕರಿಮೇರಿ ಇವರ ಮನೆಯಿಂದ ಮೈಲಾರಪ್ಪ ಬಂಗ್ಲೇದ ಇವರ ಮನೆಯವರೆಗೆ ಸಿ.ಸಿ ರಸ್ತೆ ನಿರ್ಮಾಣ | 100286.13 | 500 | |

ಅರ್ಹ ವೆಂಡರ್/ಏಜೆನ್ಸಿಗಳಿಂದ ಖಾಲಿ ದರಪಟ್ಟಿ ಫಾರಂಗಾಗಿ ಅರ್ಜಿ ಸ್ವೀಕರಿಸುವ ದಿನಾಂಕ; 14/03/2025 ರಿಂದ 20/03/2025 ರವರೆಗೆ, ಭರ್ತಿ ಮಾಡಿದ ದರಪಟ್ಟಿಗಳನ್ನು ಸ್ವೀಕರಿಸುವ ದಿನಾಂಕ;-21-3-2025 ಮುಂಜಾನೆ 10.00 ಗಂಟೆಯಿಂದ ಮಧ್ಯಾಹ್ನ 4.00 ಗಂಟೆವರೆಗೆ. ತೆರೆಯುವ ದಿನಾಂಕ ಹಾಗೂ ಸಮಯ:-21-03-2025 ರ ಸಂಜೆ 5.00ಗಂಟೆ.

ನಿಬಂಧನೆಗಳು

1) ಷರತ್ತು/ನಿಬಂಧನೆಗಳಿಗೆ, ಹೆಚ್ಚಿನ ಮಾಹಿತಿಗಾಗಿ ಕೆಲಸದ ದಿನಗಳಲ್ಲಿ (ರಜಾ ದಿನಗಳನ್ನು ಹೊರತುಪಡಿಸಿ) ಗ್ರಾಮ ಪಂಚಾಯತ ಕಛೇರಿಯಿಂದ ಮಾಹಿತಿ ಪಡೆಯಬಹುದಾಗಿದೆ.

ಸಹಿ ಆಗಿದೆ/-
**ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು**
ಗ್ರಾಮ ಪಂಚಾಯತಿ ಹುಯಿಲಗೋಳ

ಸಹಿ ಆಗಿದೆ/-
**ಅಧ್ಯಕ್ಷರು**
ಗ್ರಾಮ ಪಂಚಾಯತಿ ಹುಯಿಲಗೋಳ


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka